# ವಿಜಯ ಕಾಲ

ಪ್ರಧಾನ ಸಂಪಾದಕ: ಕೆ. ದೀಪಕ್

ಓದುಗರ ಒಡಲಾಳ

ಬೆಳಗಿನ ಕನ್ನಡ ದಿನಪತ್ರಿಕೆ

ಮೈಸೂರು | ಚಾಮರಾಜನಗರ | ಮಂಡ್ಯ | ಬೆಂಗಳೂರು



Bhavishya Academy



RNI:KARKAN/2017/74098 | ಸಂಪುಟ: 08 | ಸಂಚಿಕೆ: 31 | ಶನಿವಾರ 06 ಡಿಸೆಂಬರ್ 2025 | ದೂರವಾಣಿ – 9741511340 – 8123436767 | vijayakaalamysuru@gmail.com | ಪುಟ–4 | ರೂ. 2


## ಸಂಪಾದಕೀಯ...........

### ಹಳೆ ವ್ಯವಸ್ಥೆಗೆ ಇಟ್ಟ ಬಾಂಬಿನ ಹೆಸರೇ

# ಅಂಬೇಡ್ಕರ್



ಡಿ.6ಮಹಾನಾಯಕ ಡಾ.ಬಿ.ಆರ್.ಅಂಬೇಡ್ಕರ್ ಅವರ ಮಹಾ ಪರಿನಿರ್ವಾಣ ದಿನ. ಅಂದರೆ 'ದಲಿತ ಸೂರ್ಯ' ಅಸ್ತಂಗತಗೊಂಡ ದಿವಸ. ನಮ್ಮನ್ನು ಅಗಲಿ 69 ವರ್ಷಗಳು ಉರುಳಿದರೂ ಅವರು ಬಿಟ್ಟೋದ ಪ್ರಶ್ನೆಗಳಿಗೆ ಇಂದಿಗೂ ಉತ್ತರಗಳನ್ನು ಕಂಡುಕೊಳ್ಳಲು ಸಾಧ್ಯವಾಗಿಲ್ಲ. ದುರದೃಷ್ಟ ವಶಾತ್, ದಿಕ್ಕುದೆಸೆ ಇಲ್ಲದೆ ದಿಕ್ಕೆಟ್ಟಿದ್ದ ಭಾರತದಕ್ಕೆ ದೀವಿಗೆಯಾದ ಡಾ. ಅಂಬೇಡ್ಕರ್ ಅವರಿಗೆ ಇಂದಿಗೂ ಇದೇ ನೆಲದಲ್ಲಿ ಅವಮಾನಗಳು ನಿಂತ್ತಿಲ್ಲ. ಭಾರತಕ್ಕೆ ಬೆಳಕಾದ ಅಂಬೇಡ್ಕರ್ ಅವರ ಹೆಸರು, ವಿಚಾರಧಾರೆ ಕೇಳಿದರೇ, ಭಾವಚಿತ್ರ, ಪ್ರತಿಮೆಗಳನ್ನು ನೋಡಿದರೇ ಹೊಟ್ಟೆಗೆ ಬೆಂಕಿ ಬಿದ್ದವರಂತೆ ಅಸೂಯೆಯಿಂದ ನರಳುವ ಜನರು ನಮ್ಮ ಸುತ್ತ ಈಗಲೂ ಇದ್ದಾರೆ.

ದಲಿತರು ಡಾ. ಅಂಬೇಡ್ಕರ್ ಅವರ ವ್ಯಕ್ತಿತ್ವ, ಹೋರಾಟ, ಸಾಧನೆ, ಕೊಡುಗೆಗಳ ಬಗ್ಗೆ ಮಾತನಾಡಿದರೆ 'ಜಾತಸ್ಥರು ಹೊಗಳುತ್ತಿದ್ದಾರೆ' ಎಂದು ಮೂಗು ಮುರಿಯುವ ಮೂರ್ಖರಿಗೆ ಈ ದಿನದ 'ಕಾಲಮಾನ'ವನ್ನು ಸಮರ್ಪಿಸುತ್ತಿದ್ದೇನೆ. ಏಕೆಂದರೆ, ಬಾಬಾ ಸಾಹೇಬರು ನಿಧನರಾದ ಸುದ್ದಿಯಿಂದ ಕೇವಲ ಭಾರತ ಮಾತ್ರವಲ್ಲ ಇಡೀ ಜಗತ್ತು ದಿಗ್ಭ್ರಮೆ ವ್ಯಕ್ತಪಡಿಸಿತ್ತು. ಶೋಷಿತರು ಶೋಕಸಾಗರದಲ್ಲಿ ಮುಳುಗಿದ್ದರೆ, ಭಾರತಕ್ಕೆ ಕತ್ತಲೆ ಆವರಿಸಿತ್ತು. ಇವರ ಅಗಲಿಕೆಯ ಸುದ್ದಿ ಪ್ರಪಂಚದ ಎಲ್ಲ ದೇಶದ ಪ್ರಮುಖ ಪತ್ರಿಕೆಗಳ ಮುಖ ಪುಟದಲ್ಲಿ ವರದಿಯಾಗಿತ್ತು. ಭಾರತ ಮಾತ್ರವಲ್ಲ ಬಹುತೇಕ ಪ್ರಮುಖ ದೇಶಗಳು ತಮ್ಮ ರಾಷ್ಟ್ರ ಧ್ವಜವನ್ನು ಅರ್ಧಕ್ಕೆ ಇಳಿಸಿ ಶೋಕಾಚರಣೆಯನ್ನು ಘೋಷಿಸಿದ್ದವು. ವಿಶೇಷವೆಂದರೆ, ಪ್ರಮುಖ ಪತ್ರಿಕೆಗಳು ಡಾ. ಅಂಬೇಡ್ಕರ್ ಅವರ ಬಗ್ಗೆ ಬರೆದುಕೊಂಡಿದ್ದನ್ನು ಓದಿದರೆ ಸಾಕು ಅವರು ನಮಗೆ ಅರ್ಥವಾಗುತ್ತಾರೆ.



ಕಾಲಮಾನ-8

ದಿ ಟೈಮ್ಸ್ ಆಫ್ ಇಂಡಿಯಾ ಪತ್ರಿಕೆಯು 'ಅಂಬೇಡ್ಕರ್ ಚಿಂತನೆಗೆ ದೇಶ ಸ್ಪಂದಿಸಿದ್ದರೆ ಹಿಂದೂ ಸಮಾಜದಲ್ಲಿನ ಕೊಳಕು ತೊಳೆದು ಹೋಗುತ್ತಿತ್ತು ಮತ್ತು ಅಂಬೇಡ್ಕರ್‌ರಿಂದ ದೇಶ ನಿರ್ಮಿಸುವ ಕಾರ್ಯ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ದೊರಕುತ್ತಿತ್ತು' ಎಂದು ಪ್ರಕಟಿಸಿದ್ದಾರೆ. ಅಂಬಾಲಾದ 'ಟ್ರಿಬ್ಯೂನ್' ಪತ್ರಿಕೆಯು 'ಮುಂದಿನ ದಿನಗಳಲ್ಲಾದರೂ ಪರಿಶಿಷ್ಟ ಜಾತಿಗಳ ಬದುಕನ್ನು ಬಹು ಬೇಗನೇ ಹಸನುಗೊಳಿಸುವ ಕಾರ್ಯಕ್ಕೆ ಸರಕಾರ ಮತ್ತು ಸಮಾಜ ಆದ್ಯತೆ ನೀಡಬೇಕು. ಆಗಲಾದರೂ ಪರಿಶಿಷ್ಟ ಜಾತಿಗಳಲ್ಲೇ ಇರುವ ನೂರಾರು ಅಂಬೇಡ್ಕರರ ಸೇವೆಯು ದೇಶಕ್ಕೆ ಸಿಗುತ್ತದೆ. ಇಲ್ಲದೆ ಹೋದರೆ ಅವರುಗಳೂ ಕೂಡ ಅಂಬೇಡ್ಕರ್ ಹಾಗೆ ತಮ್ಮ ಸಮಯ, ಶಕ್ತಿ,

> ಅಂಬೇಡ್ಕರ್ ಅಸ್ಪೃಶ್ಯರ ಹಿತಕ್ಕಾಗಿ ಹೋರಾಡಿದರು ಎಂದು ಹೆಚ್ಚು ಪ್ರಚಾರವಾಗಿದೆ. ಆದರೆ ಅವರು ಭಾರತದ ನ್ಯಾಯಾಂಗ ವ್ಯವಸ್ಥೆಯ ಬಹುದೊಡ್ಡ ಕಂಬವಾಗಿದ್ದರು ಎಂಬ ಸತ್ಯ ಬೆಳಕಿಗೆ ಬರಬೇಕು. ಅವರ ಹೃದಯ ಪರಿಶಿಷ್ಟ ಜಾತಿಗಳ ಒಳಿತನ್ನು ಬಯಸುತ್ತಿದ್ದರೂ, ಅವರ ದೃಷ್ಟಿ ಭಾರತವನ್ನು, ಪ್ರಜಾಪ್ರಭುತ್ವವನ್ನು ಸಮರ್ಥವಾಗಿ ರೂಪಿಸುವಂಥ ಕನಸನ್ನು ಕಾಣುತ್ತಿತ್ತು.
>
> **ನ್ಯೂಯಾರ್ಕ್ ಟೈಮ್ಸ್ ಪತ್ರಿಕೆಯು, 1956**

ಸಾಮರ್ಥ್ಯವನ್ನು ತಮ್ಮ ಸಮುದಾಯದ ಹಿತದಲ್ಲೇ ವಿನಿಯೋಗಿಸಿಬಿಡಬಹುದು' ಎಂದು 'ಹಿಂದೂಸ್ತಾನ ಟೈಮ್ಸ್' ಪತ್ರಿಕೆಯು ' ಅಂಬೇಡ್ಕರ್ ದೇಶಕ್ಕೆ ಸಲ್ಲಿಸಿದ ಸೇವೆ ಚಿರಕಾಲ ನೆನಪಿನಲ್ಲಿರುತ್ತದೆ. ತಮ್ಮ ಸಮಕಾಲೀನರನ್ನು ಹಲವು ವಿಧದಲ್ಲಿ ಹಿಂದಕ್ಕೆ ಹಾಕುವಷ್ಟು ಅವರು ಚೈತನ್ಯಶಾಲಿಯಾಗಿದ್ದರು. ಅವರ ನಿಧನದ ನಂತರವಾದರೂ ಪರಿಶಿಷ್ಟ ಜಾತಿಗಳ ಬದುಕು ಶೀಘ್ರವಾಗಿ ಬದಲಾಗಲಿ' ಎಂದು ಅಕ್ಷರಗಳ ಮೂಲಕ ಆಶಿಸಿದೆ. 'ಫ್ರೀ ಪ್ರೆಸ್ ಜರ್ನಲ್' ಪತ್ರಿಕೆಯು 'ಅನ್ಯಾಯದ ವಿರುದ್ಧ ದನಿ ಎದ್ದಾಗಲೆಲ್ಲ ಅಂಬೇಡ್ಕರ್ ದನಿ ಕೇಳಿಸುತ್ತದೆ. ಪರಿಶಿಷ್ಟ ಜಾತಿಗಳೇ ಅಲ್ಲದೆ, ಕಾರ್ಮಿಕರು, ಮಹಿಳೆಯರು, ಹಿಂದುಳಿದವರು, ದುರ್ಬಲರು ಅವರನ್ನು ಸದಾ ತಮ್ಮ ಹೃದಯದಲ್ಲಿ ಇಟ್ಟುಕೊಂಡಿರುತ್ತಾರೆ' ಎಂದು; ಕಲ್ಕತ್ತಾದ 'ಸ್ಟೇಟ್ಸ್‌ಮನ್' ಪತ್ರಿಕೆಯು 'ಅಂಬೇಡ್ಕರ್ ಬುದ್ಧಿಶಕ್ತಿ ಮತ್ತು ಇಚ್ಛಾಶಕ್ತಿಗಳ ಸಂಗಮವಾಗಿದ್ದರು. ಅವರು ಕಾನೂನು, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ಕಾರ್ಮಿಕ ಕಾಯ್ದೆಗಳು, ಸಂವಿಧಾನ ಜ್ಞಾನ, ರಾಜಕಾರಣ, ಧರ್ಮಶಾಸ್ತ್ರಗಳು...ಹೀಗೆ ಹಲವು ಹತ್ತು ಕ್ಷೇತ್ರಗಳಲ್ಲಿ ಪರಿಣತರಾಗಿದ್ದರು' ಎಂದು; 'ಅಮೃತ ಬಜಾರ್' ಪತ್ರಿಕೆಯು 'ಹಳೆ ವ್ಯವಸ್ಥೆಗೆ ಇಟ್ಟ ಬಾಂಬಿನ ಹೆಸರೇ ಅಂಬೇಡ್ಕರ್. ನ್ಯಾಯ ಮತ್ತು ಮಾನವ ಹಕ್ಕುಗಳ ರಕ್ಷಣೆಗೆ ಬದ್ಧವಾಗಿದ್ದ ಯೋಧನೊಬ್ಬ ಅಗಲಿದ' ಎಂದು ಬಣ್ಣಿಸಿದೆ.

'ನ್ಯೂಯಾರ್ಕ್ ಟೈಮ್ಸ್' ಪತ್ರಿಕೆಯು ' ಅಂಬೇಡ್ಕರ್ ಅಸ್ಪೃಶ್ಯರ ಹಿತಕ್ಕಾಗಿ ಹೋರಾಡಿದರು ಎಂದು ಹೆಚ್ಚು ಪ್ರಚಾರವಾಗಿದೆ. ಆದರೆ ಅವರು ಭಾರತದ ನ್ಯಾಯಾಂಗ ವ್ಯವಸ್ಥೆಯ ಬಹುದೊಡ್ಡ ಕಂಬವಾಗಿದ್ದರು ಎಂಬ ಸತ್ಯ ಬೆಳಕಿಗೆ ಬರಬೇಕು. ಅವರ ಹೃದಯ ಪರಿಶಿಷ್ಟ ಜಾತಿಗಳ ಒಳಿತನ್ನು ಬಯಸುತ್ತಿದ್ದರೂ, ಅವರ ದೃಷ್ಟಿ ಭಾರತವನ್ನು, ಪ್ರಜಾಪ್ರಭುತ್ವವನ್ನು ಸಮರ್ಥವಾಗಿ ರೂಪಿಸುವಂಥ ಕನಸನ್ನು ಕಾಣುತ್ತಿತ್ತು' ಎಂದೂ ಹಾಗೂ ಲಂಡನ್ನಿನ 'ದಿ ಟೈಮ್ಸ್' ಪತ್ರಿಕೆಯು 'ಭಾರತದಲ್ಲಿ ಬ್ರಿಟಿಷ್ ಆಡಳಿತದ ದಿನಗಳಲ್ಲಿ ಅಂಬೇಡ್ಕರ್ ವಹಿಸಿದ ಪಾತ್ರ ವಿಶ್ವ ಗಮನಿಸುವಂಥದ್ದು, ದುಂಡುಮೇಜಿನ ಪರಿಷತ್ತಿನಲ್ಲಿ ಅವರು ಆಡಿದ ಮಾತುಗಳು ಅವರ ವಿದ್ವತ್ತಿಗೆ ಸಾಕ್ಷ್ಯ' ಎಂದು ವರದಿ ಮಾಡಿತು.

ಈ ಮಹಾನ್ ಮಾನವತಾವಾದಿಗೆ ಭಾರತ ಸರಕಾರವು 1990ರಲ್ಲಿ ಮರಣೋತ್ತರವಾಗಿ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿದರೆ, 2016ರಲ್ಲಿ ವಿಶ್ವ ಸಂಸ್ಥೆಯು ಅವರ ಜನುಮ ದಿನವನ್ನು (ಏಪ್ರಿಲ್ 14) 'ವಿಶ್ವಜ್ಞಾನ ದಿನ' ಎಂದು ಘೋಷಿಸಿತು. ಕೆನಡ ಸರಕಾರವು ಡಾ. ಅಂಬೇಡ್ಕರ್ ಅವರ ಮೇಲಿನ ಗೌರವಾರ್ಥ ಏಪ್ರಿಲ್ 14ನೇ. 2021ರ ಜಯಂತಿಯಂದು 'ಡಾ. ಅಂಬೇಡ್ಕರ್ ಸಮಾನತ ದಿನ' ಎಂದು ಘೋಷಿಸಿತು.

ಈ ಎಲ್ಲ ಹೊಗಳಿಕೆ, ಪ್ರಶಂಸೆ, ಗುಣಗಾನ, ಗೌರವಗಳು ಭಾರತದ ಬೇರಾವ ನಾಯಕರಿಗೂ ದೊರಕಲಿಲ್ಲವೆಂದಾದರೆ ನೀವು ಅವಮಾನಿಸುತ್ತಿವುದು ಅಂಬೇಡ್ಕರ್ ಅವರನ್ನಲ್ಲ, ಆಮೂಲಕ ನಿಮ್ಮನ್ನು ನೀವೆ ಅಪಹಾಸ್ಯಕ್ಕೆ ಈಡಾಗುತಿದ್ದೀರಿ ಎಂದರ್ಥ. ಇಂದಿಗೂ ಡಾ. ಬಿ.ಆರ್.ಅಂಬೇಡ್ಕರ್ ಅವರು ಶತ್ರುಗಳ ಮುಂದೆ ಪ್ರತಿ ವರ್ಷ, ಪ್ರತಿ ತಿಂಗಳು, ಪ್ರತಿ ದಿನ, ಪ್ರತಿ ಕ್ಷಣ ಬೆಳೆಯುತ್ತಲೇ ಇದ್ದಾರೆ ಎಂದು ಹೇಳುತ್ತಾ ದಲಿತ ವಿರೋಧಿಗಳು, ಅಂಬೇಡ್ಕರ್ ವಿರೋಧಿಗಳ ಆತ್ಮಕ್ಕೆ ಶಾಂತಿ ಕೋರುತ್ತಾ 'ಕಾಲಮಾನ'ಕ್ಕೆ ಅಲ್ಪ ವಿರಾಮ ಹೇಳುತ್ತೇನೆ...

**ಜೈ ಭೀಮ್...**

# ಬಜೆಟ್ ಮಂಡನೆಗೆ ತಯಾರಿ

## ವಾಣಿಜ್ಯ ಇಲಾಖೆಗೆ ಗುರಿಕೊಟ್ಟ ಮುಖ್ಯಮಂತ್ರಿ ಸಿದ್ದರಾಮಯ್ಯ



ಬೆಂಗಳೂರು: ರಾಜ್ಯದ ಆರ್ಥಿಕತೆ ನಿರ್ವಹಣೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಾಣಿಜ್ಯ ತೆರಿಗೆ ಇಲಾಖೆಗೆ 2025–26 ನೇ ಹಣಕಾಸು ಸಾಲಿನಲ್ಲಿ ರೂ. 1,20,000 ಕೋಟಿ ಗುರಿಯನ್ನು ನಿಗದಿಪಡಿಸಿದ್ದಾರೆ.

ಈ ಸಂಬಂಧ ಇಂದು ವಾಣಿಜ್ಯ ಇಲಾಖೆ ಅಧಿಕಾರಿಗಳ ಸಭೆ ನಡೆಸಿದರು.

ನವೆಂಬರ್ ಅಂತ್ಯದವರೆಗೆ ರೂ. 80 ಸಾವಿರ ಕೋಟಿ ಗುರಿ ನಿಗದಿಪಡಿಸಲಾಗಿದೆ. ಇದರಲ್ಲಿ ನಿವ್ವಳ ಸಂಗ್ರಹ ರೂ. 72131 ಕೋಟಿ ಮಾಡಲಾಗಿದ್ದು, ಸಾಧನೆ ಶೇಕಡಾವಾರು ಶೇ.90 ಸಾಧನೆ ಮಾಡಲಾಗಿದೆ. ಇದರಲ್ಲಿ ಜಿಎಸ್ಟಿ ರೂ. 53,522 ಕೋಟಿ, ಕೆಎಸ್ಟಿ ರೂ. 17,595 ಕೋಟಿ ಮತ್ತು ವೃತಿ ತೆರಿಗೆ1014 ಕೋಟಿ ಸಂಗ್ರಹಿಸಲಾಗಿದೆ.


ಆರಂಭದ ಐದು ತಿಂಗಳಲ್ಲಿ ಎಪ್ರಿಲ್‌ನಿಂದ ಆಗಸ್ಟ್‌ವರೆಗೆ ಶೇ.12ರಷ್ಟು ಬೆಳವಣಿಗೆ ದರ ಸಾಧಿಸಲಾಗಿದೆ. ಆದರೆ ಜಿಎಸ್‌ಟಿ ದರಗಳಲ್ಲಿ ಬದಲಾವಣೆ ಹಿನ್ನೆಲೆಯಲ್ಲಿ ತೆರಿಗೆ ಸಂಗ್ರಹದಲ್ಲಿ ಕಳೆದ ಮೂರು ತಿಂಗಳಲ್ಲಿ ಕೇವಲ ಶೇ.3ರಷ್ಟು ಬೆಳವಣಿಗೆ ದರವನ್ನು ಸಾಧ್ಯವಾಗಿದೆ.

ವಾಣಿಜ್ಯ ತೆರಿಗೆ ಸಂಗ್ರಹದಲ್ಲಿ ಶೇ.100ರಷ್ಟು ನಿಗದಿತ ಗುರಿಯನ್ನು ಸಾಧಿಸಬೇಕು.

ನವೆಂಬರ್ ಅಂತ್ಯದವರೆಗೆ ಸುಮಾರು 13 ಸಾವಿರ ತಪಾಸಣೆಗಳನ್ನು ಮಾಡಿದ್ದು, ತಪಾಸಣೆಯಿಂದ ರೂ. 3183 ಕೋಟಿ ತೆರಿಗೆ ಸಂಗ್ರಹಿಸಲಾಗಿದೆ.

ವಾಣಿಜ್ಯ ತೆರಿಗೆ ವಿಚಕ್ಷಣಾ ದಳ ತೆರಿಗೆ ಕಳ್ಳತನವನ್ನು ತಪ್ಪಿಸಲು ನಿರಂತರ ತಪಾಸಣೆಗಳನ್ನು ಕೈಗೊಳ್ಳಬೇಕು. ತೆರಿಗೆ ತಪ್ಪಿಸಲು ಯಾವುದೇ ಅವಕಾಶ ಇಲ್ಲದಂತೆ ಕಟ್ಟೆಚ್ಚರದಿಂದ ಕಾರ್ಯ ಪುಟ 02

# ಕಾಂಗ್ರೆಸ್ಸಿನಲ್ಲಿ ಗೊಂದಲ ಇಲ್ಲ : ಸಚಿವ ದಿನೇಶ್ ಗುಂಡೂರಾವ್



ಮೈಸೂರು:– ಸಿಎಂ ಬದಲಾವಣೆ ವಿಚಾರಕ್ಕೆ, "ನಮ್ಮಲ್ಲಿ ಯಾವುದೇ ಗೊಂದಲವಿಲ್ಲ. ಸಿಎಂ ಹಾಗೂ ಡಿಸಿಎಂ ಇಬ್ಬರು ಹೈಕಮಾಂಡ್ ನಿರ್ಧಾರಕ್ಕೆ ಬದ್ಧ ಎಂದಿದ್ದಾರೆ. ಹೈಕಮಾಂಡ್ ತೀರ್ಮಾನವೇ ಅಂತಿಮ. ನಮ್ಮಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ಎಲ್ಲರಿಗೂ ಸಿಎಂ ಆಗಬೇಕು ಎಂಬ ಆಸೆ ಇರುತ್ತದೆ. ಆದರೆ ಯಾರು ಆಗಬೇಕು ಎಂಬುದನ್ನು, ಹೈಕಮಾಂಡ್ ನಿರ್ಧಾರ ಮಾಡುತ್ತದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಸ್ವಸ್ಥ ಮೈಸೂರು ಅಭಿಯಾನಕ್ಕೆ ಒಪ್ಪಂದಕ್ಕೆ ಸಹಿ ಹಾಕುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ನೀವು ಸಹ ಸಿಎಂ ರೇಸ್ನಲ್ಲಿ ಇದ್ದೀರಾ? ಎಂಬ ಪ್ರಶ್ನೆಗೆ, "ನನ್ನನ್ನು ಯಾಕೆ ಪುಟ 02

# ಮಂಡ್ಯದಲ್ಲಿ ಕೃಷಿ ಮೇಳಕ್ಕೆ ಸಿದ್ದರಾಮಯ್ಯ ಚಾಲನೆ



ಮಂಡ್ಯ: ರೈತರು ತಮ್ಮ ವ್ಯವಸಾಯ ಪದ್ಧತಿಯಲ್ಲಿ ಸಮಗ್ರ ಕೃಷಿ ಪದ್ಧತಿಯನ್ನು ಅನುಸರಿಸಬೇಕು ಹಾಗೂ ಉತ್ಪಾದಿಸಿದ ಉತ್ಪನ್ನಗಳನ್ನು ಮೌಲ್ಯವರ್ಧನೆ ಮಾಡಬೇಕು ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಹೇಳಿದರು.

ಇಂದು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಪಶು ಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳು ಜಲಾನಯನ ಅಭಿವೃದ್ಧಿ ಇಲಾಖೆ, ರೇಷ್ಮೆ, ಅರಣ್ಯ, ಮೀನುಗಾರಿಕೆ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ನಬಾರ್ಡ್ ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ವಿ.ಸಿ ಫಾರಂ ಆವರಣದಲ್ಲಿ ಆಯೋಜಿಸಲಾಗಿದ್ದ "ಕೃಷಿ ಮೇಳ 2025" ಸಮಗ್ರ ಕೃಷಿಯಿಂದ ಸುಸ್ಥಿರತೆ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಮಂಡ್ಯದಲ್ಲಿ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯ ಸ್ಥಾಪಿಸಲು ನನ್ನ ಮುಂದೆ ಮೊದಲು ಬೇಡಿಕೆ ಇಟ್ಟವರು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಮಂಡ್ಯ ಮೈಸೂರು ಚಾಮರಾಜನಗರ ಕೊಡಗು ಭಾಗದ ರೈತರಿಗಾಗಿ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯ ಅಗತ್ಯವಿದೆ ಎಂದು ನನಗೂ ಸಹ ತಿಳಿಯಿತು. ನಂತರ ಸದರಿ ವಿಚಾರವನ್ನು ಕ್ಯಾಬಿನೆಟ್ ನಲ್ಲಿ ಚರ್ಚೆ ಮಾಡಿ ಎಲ್ಲಾ ಸಚಿವರ ಒಪ್ಪಿಗೆ ಪಡೆದು ಮಂಡ್ಯದಲ್ಲಿ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಲಾಯಿತು ಎಂದು ಹೇಳಿದರು.


ಮಂಡ್ಯ ಭಾಗದ 5 ಜಿಲ್ಲೆಗಳ ಪ್ರಮುಖ ಬೆಳೆಗಳ ಪ್ರಾತ್ಯಕ್ಷಿಕೆಗಳನ್ನು ಕೃಷಿ ಮೇಳದಲ್ಲಿ ಆಯೋಜಿಸಲಾಗಿದೆ. ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯಗಳು ಅಭಿವೃದ್ಧಿಪಡಿಸಿದ ತಳಿಗಳು ಮತ್ತು ತಂತ್ರಜ್ಞಾನವನ್ನು ತಮ್ಮಲ್ಲಿಗೆ ಇಟ್ಟುಕೊಂಡರೆ ಪ್ರಯೋಜನವಿಲ್ಲ ಅದನ್ನು ರೈತರಿಗೆ ತಲುಪಿಸಬೇಕು ಆಗ ಮಾತ್ರ ರೈತರು ಆರ್ಥಿಕವಾಗಿ ಸಬಲರಾಗಲು ಸಾಧ್ಯವಾಗುತ್ತದೆ. ಭಾರತ ಕೃಷಿ ಪ್ರಧಾನ ಜಿಲ್ಲೆ ಇತ್ತೀಚಿನ ದಿನಗಳಲ್ಲಿ ಕೃಷಿಕರ ಸಂಖ್ಯೆ ಇಳಿಮುಖವಾಗಿದೆ ಎಂದು ಅಭಿಪ್ರಾಯಪಟ್ಟರು.

ಮಂಡ್ಯ ಕೃಷಿ ಪ್ರಧಾನವಾದ ಜಿಲ್ಲೆ ನಾನು ರಾಜಕೀಯಕ್ಕೆ ಬರುವ ಮೊದಲು ಸಹ ಕೃಷಿಕನಾಗಿದ್ದೆ. ಮೈಸೂರಿನ ರೈತ ಸಂಘದ ಮೊದಲ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸಿದ್ದೇನೆ. ಕೃಷಿಯನ್ನು ವೈಜ್ಞಾನಿಕ ವಿಧಾನದಲ್ಲಿ ಮಾಡಿದಾಗ ಕೃಷಿಯಿಂದ ಹೆಚ್ಚಿನ ಲಾಭಗಳಿಸಬಹುದು. ರೈತರು ತಾವು ಬೆಳೆದ ಬೆಳೆಗಳನ್ನು ಮೌಲ್ಯವರ್ತನೆ ಮಾಡಬೇಕು ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಕೃಷಿ ಕಾರ್ಯಕ್ಕೆ ಮಾನವ ಸಂಪನ್ಮೂಲ ಕಡಿಮೆ ಇದೆ ರೈತರು ಆಧುನಿಕ ಯಂತ್ರೋಪಕರಣಗಳನ್ನು ಬಳಸಿ ಕೃಷಿ ಮಾಡಬೇಕು ಇದರಿಂದ ಸಮಯ ಮತ್ತು ಹಣ ಎರಡು ಉಳಿತಾಯವಾಗುತ್ತದೆ. ಸರ್ಕಾರ ಕೃಷಿ ಯಂತ್ರೋಪಕರಣಗಳು ಸೇರಿದಂತೆ ಅನೇಕ ಸವಲತ್ತುಗಳನ್ನು ನೀಡುತ್ತಾ ಬಂದಿದೆ ಎಂದು ಹೇಳಿದರು.

ಅಂತರಾಷ್ಟ್ರೀಯ ಸ್ಯಾಂಡ್ವಿಚ್ ಸ್ನಾತಕೋತರ ಪದವಿ ಸ್ಥಾಪನೆಗೆ ಬೇಡಿಕೆ :ಮಂಡ್ಯ ವಿಜ್ಞಾನಿಗಳ ವಿಶ್ವವಿದ್ಯಾನಿಲಯದಲ್ಲಿ ಪುಟ 02

# ದುಬಾರಿ ವಾಕ್ ಪ್ರಕರಣ: ಡಿಸಿಎಂ ಸವಾಲು



ಬೆಂಗಳೂರು:– ದುಬಾರಿ ವಾಚ್ ಕದ್ದದ್ದೋ, ಕೊಂಡದ್ದೋ ಎಂಬ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿಕೆಗೆ ಡಿಸಿಎಂ ಡಿಕೆ ಶಿವಕುಮಾರ್ ತಿರುಗೇಟು ನೀಡಿದ್ದಾರೆ.

ಈ ಕುರಿತು ಮಾತನಾಡಿರುವ ಡಿಸಿಎಂ ಡಿಕೆ ಶಿವಕುಮಾರ್, ನಾನು ನನ್ನ ವಾಚ್ ವಿಚಾರವಾಗಿ ಲೋಕಾಯುಕ್ತ ಸೇರಿದಂತೆ ಎಲ್ಲೆಲ್ಲಿ ಮಾಹಿತಿ ನೀಡಬೇಕೋ, ಎಲ್ಲಾ ನೀಡಿದ್ದೇನೆ. ನಾನು ಈ ವಿಚಾರದಲ್ಲಿ ಸುಳ್ಳು ಹೇಳಿದ್ದರೆ ಇಂದೇ ರಾಜೀನಾಮೆ ನೀಡುತ್ತೇನೆ ಇಲ್ಲವಾದರೆ ಚಲವಾದಿ ನಾರಾಯಣಸ್ವಾಮಿ ಅವರು ರಾಜೀನಾಮೆ ನೀಡುತ್ತಾರಾ ಎಂದು ನೇರಸವಾಲು ಹಾಕಿದರು.

ನಾರಾಯಣಸ್ವಾಮಿ ಅವರಿಗೆ ಇನ್ನೂ ಅನುಭವವಿಲ್ಲ. ಂುಾವುದಾದರೂ ವಿಚಾರದ ಬಗ್ಗೆ ಮಾತನಾಡಬೇಕಾದರೆ ಕನಿಷ್ಟ ಪರಿಜ್ಞಾನ ಇರಬೇಕು. ಬರೀ ಪ್ರಚಾರಕ್ಕೆ ಮಾತನಾಡುವುದಲ್ಲ. ಅವರೂ ಜವಾಬ್ದಾರಿಯಿಂದ ಕೆಲಸ ಮಾಡುವುದನ್ನು ಕಲಿಯಬೇಕು., ಅವರೇ ಹೋಗಿ ಲೋಕಾಯುಕ್ತದಲ್ಲಿ ಪರಿಶೀಲನೆ ಮಾಡಲಿ. ಅಲ್ಲಿ ಸಲ್ಲಿಸಿರುವ ಆದಾಯ ಅಫಿಡವಿಟ್ ಸಾರ್ವಜನಿಕ ದಾಖಲೆಯಾಗಿದ್ದು, ಅದನ್ನು ಅವರೂ ಪಡೆಯಬಹುದು ಎಂದು ಡಿಕೆ ಶಿವಕುಮಾರ್ ಹೇಳಿದರು.

ಈ ವಿಚಾರವನ್ನ ಸದನದಲ್ಲೂ ಪ್ರಸ್ತಾಪಿಸಲಿ, ಯಾರು ಬೇಡ ಎನ್ನುತ್ತಾರೆ. ದೇಶದೆಲ್ಲೆಡೆ ಚರ್ಚೆ ಮಾಡಲಿ. ನನ್ನ ದಾಖಲೆ ಅವರಿಗೆ ತೋರಿಸುವ ಅಗತ್ಯವಿಲ್ಲವಾದರೂ ನಾನು ಆ ವಾಚ್ ಕದ್ದಿದ್ದೇನೆ ಎಂದು ಹೇಳಿದ್ದಕ್ಕೆ ತೋರಿಸಿದ್ದೇನೆ ಎಂದು ಡಿಕೆ ಶಿವಕುಮಾರ್ ತಿಳಿಸಿದರು.

# ಯಶಸ್ಸಿನ ಹಾದಿಯಲ್ಲಿ ಕೃಷಿ ವಿವಿ: ಸಚಿವ ಎನ್.ಚಲುವರಾಯಸ್ವಾಮಿ



ಮಂಡ್ಯ:– ಕೃಷಿ ಮೇಳ 2025ರಲ್ಲಿ ಹೆಚ್ಚಿನ ಕೃಷಿ ತಳಿಗಳು, ತಂತ್ರಜ್ಞಾನಗಳನ್ನು ಆಧುನಿಕ ಯಂತ್ರೋಪಕರಣಗಳನ್ನು ಮೇಳದಲ್ಲಿ ಇರಿಸಲಾಗಿದೆ. ರೈತರು ಇದರ ಸದುಪಯೋಗ ಪಡಿಸಿಕೊಂಡಾಗ ಮಾತ್ರ ಮೇಳಕ್ಕೆ ಅರ್ಥಬರಲಿದೆ ಎಂದು ಜಿಲ್ಲಾ ಉಸ್ತುವಾರಿ ಹಾಗೂ ಕೃಷಿ ಸಚಿವರಾದ ಎನ್. ಚಲುವರಾಯಸ್ವಾಮಿ ಎಂದು ಹೇಳಿದರು.

ಬೆಂಗಳೂರು ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯದ ಆಯೋಜಿಸಲಾಗಿದ್ದ ಕೃಷಿ ಮೇಳದಲ್ಲಿ ಸುಮಾರು 50 ಲಕ್ಷಕ್ಕೂ ಹೆಚ್ಚು ಜನ ಭಾಗಿಯಾಗಿ ಯಶಸ್ವಿಗೊಳಿಸಿದರು. ಮುಂದಿನ ದಿನಗಳಲ್ಲಿ ಮಂಡ್ಯ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯ ಕೃಷಿ ಮೇಳದಲ್ಲಿ ದೊಡ್ಡ ಮಟ್ಟದಲ್ಲಿ ಜನರು ಭಾಗಿಯಾಗುತ್ತಾರೆ ಎಂದು ಹೇಳಿದರು. ಪುಟ 02

# ಪೊಲೀಸ್ ಇಲಾಖೆ ಭ್ರಷ್ಟಾಚಾರಕ್ಕೆ ಕಡಿವಾಣ: ಪರಮೇಶ್ವರ್



ಬೆಂಗಳೂರು: ನಾನು ಗೃಹ ಸಚಿವನಾದ ಮೇಲೆ ಯಾರಿಂದಲೂ ಹಣ ಪಡೆದಿಲ್ಲ. ಹಣ ಪಡೆದು ಯಾವುದೇ ಪೋಲಿಸರಿಗೆ ಪೋಸ್ಟಿಂಗ್ ಮಾಡಿಲ್ಲ. ಪೊಲೀಸ್ ಇಲಾಖೆಯಲ್ಲಿನ ಭ್ರಷ್ಟಾಚಾರ ಕಡಿಮೆ ಮಾಡಲು ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದರು.

ಮಾಧ್ಯಮಗಳ ಜೊತೆ ಮಾತನಾಡಿದ ಗೃಹ ಸಚಿವ ಪರಮೇಶ್ವರ್, ಪೊಲೀಸ್ ಇಲಾಖೆಯಲ್ಲಿ ಲಂಚ ಕಡಿಮೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಈಗಾಗಲೇ 124 ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. 7.11 ಕೋಟಿ ದರೋಡೆ ಕೇಸ್ ನಲ್ಲಿ ಓರ್ವ ಪಿಸಿ ಭಾಗಿಯಾಗಿದ್ದ. ಆತನನ್ನು ಕೆಲಸದಿಂದ ವಜಾಗೊಳಿಸುತ್ತೇವೆ. ದಾವಣಗೆರೆಯಲ್ಲಿ ಚಿನ್ನಭಾರಣ ವ್ಯಾಪಾರಿ ದರೋಡೆ ಪ್ರಕರಣದಲ್ಲಿ ಓರ್ವ ಪ್ರೊಬೆಷನರಿ ಪಿಎಸ್ ಐ ವಜಾಗೊಳಿಸಿದ್ದೇವೆ ಮತ್ತೊಬ್ಬ ಪಿಎಸ್ ಐ ಅಮಾನತು ಮಾಡಿದ್ದೇವೆ. ಕೋಲಾರದ ಪೊಲೀಸ್ ಸಿಬ್ಬಂದಿಯನ್ನು ವಜಾ ಮಾಡುತ್ತೇವೆ. ಅವರು ಕೋರ್ಟ್ ಗೆ ಹೋದರೆ ನಾವು ಕೂಡ ಹೋಗುತ್ತೇವೆ ಎಂದರು.

ನಾನು ಗೃಹಸಚಿವನಾದ ಮೇಲೆ ಯಾರಿಂದಲೂ ಹಣ ಪಡೆದಿಲ್ಲ ಹಣ ಪಡೆದು ಯಾವುದೇ ಪೋಲಿಸರಿಗೆ ಪೋಸ್ಟಿಂಗ್ ಮಾಡಿಲ್ಲ. ಲಂಚ ಪಡೆದಿದ್ದು ಸಾಬೀತು ಪಡಿಸಿದರೆ ಗೃಹ ಸಚಿವ ಸ್ಥಾನದಲ್ಲಿರಲ್ಲ. ಯಾರೊ ಒಬ್ಬ ನನ್ನ ಪರಿಚಯವಿದೆ ಎಂದು ಲಂಚ ಪಡೆದರೇ ಆತನ ವಿರುದ್ದವೂ ಕ್ರಮ ಕೈಗೊಳ್ಳುತ್ತೇವೆ. ಮೊನ್ನೆ ಕಮಿಷನರ್ ಕಚೇರಿಯಲ್ಲಿ ಓರ್ವ ಪಿಸಿ ಹಣ ಪಡೆದಿದ್ದ. ಆತನ ವಿರುದ್ದವೂ ಕ್ರಮ ಕೈಗೊಳ್ಳುತ್ತೇವೆ ಬೆಳಗಾವಿ ಲಾಠಿ ಚಾರ್ಜ್ ಬಗ್ಗೆ ನ್ಯಾಯಾಂಗ ತನಿಖೆ ನಡೆಯುತ್ತಿದೆ ಎಂದು ಪರಮೇಶ್ವರ್ ತಿಳಿಸಿದರು.

ನಗರ ಪೊಲೀಸರು ಮಾದಕ ದ್ರವ್ಯ ಅಪರಾಧಗಳನ್ನು ಎದುರಿಸುವಲ್ಲಿ ಅತ್ಯುತ್ತಮ ಪ್ರಗತಿ ಸಾಧಿಸಿದ್ದಾರೆ. 2025 ರಲ್ಲಿ 1491 ಭಾರತೀಯ ಪ್ರಜೆಗಳು ಮತ್ತು 52 ವಿದೇಶಿ ಪ್ರಜೆಗಳ ಬಂಧನ ಮಾಡಲಾಗಿದೆ. ಸುಮಾರು 160 ಕೋಟಿ ಮೌಲ್ಯದ ಮಾದಕ ದ್ರವ್ಯಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದರು.

ರಾಜ್ಯ ಪೊಲೀಸರು ಅತ್ಯಂತ ಪ್ರಾಮಾಣಿಕತೆ ಮತ್ತು ಕರ್ತವ್ಯ ಬದ್ಧತೆಯಿಂದ ಸರ್ಕಾರದ ಜೊತೆ ಕೆಲಸ ನಿರ್ವಹಿಸುತ್ತಿದ್ದಾರೆ. ಪೊಲೀಸ್ ಇಲಾಖೆಯ ಉದ್ದೇಶ ಜನ ಸ್ನೇಹಿಯಾಗಿರಬೇಕು ಮತ್ತು ಯಾವುದೇ ರೀತಿ ನಾಗರೀಕರಿಗೆ ಪುಟ 02

# ಜ್ಞಾನ ಧ್ಯಾನದ ಬಲದಿಂದ ಆತ್ಮವಿಶ್ವಾಸ ವೃದ್ಧಿ: ಪಂಪಾಶ್ರೀ

ಮಂಡ್ಯ:– ಆಧುನೀಕತೆಯ ಅಬ್ಬರದಲ್ಲಿ ಸಿಲುಕಿರುವ ಮನುಷ್ಯ ಜಂಜಾಟದಿಂದ ಮುಕ್ತರಾಗಲು ಧ್ಯಾನ ಮತ್ತು ಯೋಗಾಭ್ಯಾಸದಿಂದ ಸಾಧ್ಯವಾಗುತ್ತದೆ ಎಂದು ಮಂಡ್ಯ ನಗರಸಭೆ ಪೌರಾಯುಕ್ತೆ ಯು.ಪಿ. ಪಂಪಾಶ್ರೀ ಹೇಳಿದರು.



ನಗರದ ಸ್ವರ್ಣಸಂದ್ರ ಬಡಾವಣೆ ಯ ಪರಮಪೂಜ್ಯ ಡಾ.ಶ್ರೀ ಶಿವಕುಮಾರ ಮಹಾಸ್ವಾಮೀಜಿ ಉದ್ಯಾನವನದ ಧ್ಯಾನಕೇಂದ್ರದಲ್ಲಿ ಕಾಯಕಯೋಗಿ ಫೌಂಡೇಶನ್ ಆಯೋಜಿಸಿದ್ದ 'ದಾಸೋಹ ಹುಣ್ಣಿಮೆ' ಕಾರ್ಯಕ್ರಮದಲ್ಲಿ ಸಸಿ ನೆಡುವ ಮೂಲಕ ತಮ್ಮ ಜನ್ಮದಿನಾಚರಣೆಯನ್ನು ಆಚರಿಸಿ ಕೊಂಡು ಅವರು ಮಾತನಾಡಿದರು. ಬಾಲ್ಯಾವಸ್ಥೆಯಲ್ಲೇ ಮಕ್ಕಳಿಗೆ ಯೋಗ, ಧ್ಯಾನ,ಕ್ರೀಡೆ, ಕರಾಟೆಯಂತಹ ಸಾಹಸ ಕಲೆಗಳನ್ನು ಅಭ್ಯಾಸ ಮಾಡಿಸಿದಲ್ಲಿ ದೈಹಿಕ ಮತ್ತು ಮಾನಸಿಕ ಶಕ್ತಿ ಹೆಚ್ಚಿ ಜ್ಞಾನ ವೃದ್ಧಿಯಾಗುತ್ತದೆ. ಜ್ಞಾನ ಧ್ಯಾನದ ಬಲದಿಂದ ಆತ್ಮವಿಶ್ವಾಸ ಹೆಚ್ಚಳವಾಗುತ್ತದೆ ಎಂದರು.

ಬಡವ ಶ್ರೀಮಂತನೆಂಬ ಬೇಧವಿಲ್ಲದೆ ಎಲ್ಲಾ ಜಾತಿ ಧರ್ಮದವರಿಗೂ ಉಚಿತವಾಗಿ ಅನ್ನ, ಅಕ್ಷರ, ಆಸರೆಯಂತಹ ತ್ರಿವಿಧ ದಾಸೋಹವನ್ನು ತಮ್ಮ 111 ವರ್ಷಗಳ ಕಾಲ ನಡೆಸಿಕೊಂಡು ಬಂದಿದ್ದ ತುಮಕೂರಿನ ಸಿದ್ದಗಂಗಾಮಠದ ಶ್ರೀ ಶಿವಕುಮಾರ ಮಹಾಸ್ವಾಮೀಜಿಯವರ ಆದರ್ಶ ಅನುಕರಣೀಯವಾಗಿದೆ ಎಂದು ಶ್ರೀಮಠದ ಸೇವಾ ಕಾರ್ಯವನ್ನು ಶ್ಲಾಘಿಸಿದರು.

ಕಾಯಕಯೋಗಿ ಫೌಂಡೇಶನ್ ಸಂಸ್ಥೆ ಕಳೆದ ಹಲವಾರು ವರ್ಷಗಳಿಂದ ನೂರಾರು ಸಾಮಾಜಿಕ ಸೇವಾ ಕಾರ್ಯಗಳನ್ನು ನಡೆಸಿಕೊಂಡು ಬರುತ್ತಿದ್ದು ಅಪಾರ ಜನಮನ್ನಣೆಗೆ ಪಾತ್ರವಾಗಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ನಿರ್ಮಾಣವಾಗಿರುವ ಧ್ಯಾನಕೇಂದ್ರವನ್ನು ಸದ್ಬಳಕೆ ಮಾಡಿಕೊಂಡು ಯೋಗ-ಧ್ಯಾನ ಅಭ್ಯಾಸ ಮಾಡಬೇಕೆಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ನಗರಸಭೆ ಸದಸ್ಯೆ ಕೆ.ವಿದ್ಯಾಮಂಜುನಾಥ್, ಮಂಡ್ಯ ನಗರದಲ್ಲಿ ಪರಿಸರ ಮತ್ತು ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡುತ್ತಾ ಬಂದಿರುವ ಪೌರಾಯುಕ್ತೆ ಪಂಪಾಶ್ರೀ ಅವರು ತಮ್ಮ ಜನ್ಮದಿನವನ್ನು ಸಸಿ ನೆಡುವ ಮೂಲಕ ಆಚರಣೆ ಮಾಡಿಕೊಳ್ಳುತ್ತಿರುವುದು ಇತರರಿಗೆ ಮಾದರಿಯಾಗಿದೆ. ಪ್ರತಿಯೊಬ್ಬರಿಗೂ ಪರಿಸರ ಕಾಳಜಿ ಇದ್ದಾಗ ಮಾತ್ರ ಸುಂದರವಾದ ವಾತಾವರಣ ನಿರ್ಮಾಣವಾಗಲು ಸಾಧ್ಯ ಎಂದರು.

**ಕರಾಟೆಗೆ ಚಾಲನೆ :** ಕರಾಟೆ ತರಬೇತುದಾರರಾದ ಲೋಕೇಶ್ ಮೊದಲಿಯಾರ್ ನೇತೃತ್ವದ ಗೋಜು–ರಿಯೋ ಕರಾಟೆ ಡೋ ಅಕಾಡೆಮಿ ವತಿಯಿಂದ ಶ್ರೀ ಶಿವಕುಮಾರಮಹಾಸ್ವಾಮೀಜಿ ಧ್ಯಾನಕೇಂದ್ರದಲ್ಲಿ ಕರಾಟೆ, ಯೋಗ ಮತ್ತು ಧ್ಯಾನ ತರಬೇತಿ ಕೇಂದ್ರಕ್ಕೆ ಗಣ್ಯರು ಚಾಲನೆ ನೀಡಿದರು.

ಇಂಡುವಾಳು ಗ್ರಾ.ಪಂ. ಅಧ್ಯಕ್ಷೆ ಶೈಲಜಾ ಸುಂಡಹಳ್ಳಿ ಸೋಮಶೇಖರ್, ನಗರಸಭೆ ನಾಮ ನಿರ್ದೇಶನ ಸದಸ್ಯ ಸುಮನ್ ಅವರನ್ನು ಅಭಿನಂದಿಸಲಾಯಿತು. ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್ ಪ್ರಾಸ್ತಾವಿಕ ಭಾಷಣ ಮಾಡಿದರು.

ಜಾಗತಿಕ ಲಿಂಗಾಯತ ಮಹಾಸಭಾ ಕಾರ್ಯಾಧ್ಯಕ್ಷ ಎಂ.ಎಸ್. ಮಂಜುನಾಥ್ ಬೆಟ್ಟಹಳ್ಳಿ, ಜಿಲ್ಲಾ ನಿರ್ದೇಶಕ ಮೆಣಸಗೆರೆ ಶಿವಲಿಂಗಪ್ಪ, ಪ್ರ.ಕಾರ್ಯದರ್ಶಿ ಶಿವರುದ್ರಪ್ಪ, ಸುಂಡಹಳ್ಳಿ ಸೋಮಶೇಖರ್, ವಕೀಲ ಕಾಲ್ಕೆರೆ ನಾಗೇಶ್, ರುದ್ರೇಗೌಡ, ಪರಿಸರ ಅಧಿಕಾರಿ ಅಶ್ವಥ್, ಬಸರಾಳು ಬಸವರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ನೂರಾರು ಮಂದಿ ಭಕ್ತರು ಸ್ವಾಮೀಜಿಯವರ ಪುತ್ಥಳಿಗೆ ಪೂಜೆ ಸಲ್ಲಿಸಿ ಪ್ರಸಾದ ಸ್ವೀಕರಿಸಿದರು.

# ಪಲ್ಸ್ ಪೋಲಿಯೋ ಲಸಿಕಾ ಕುರಿತ ತರಬೇತಿ ಕಾರ್ಯಾಗಾರ



ಚಾಮರಾಜನಗರ:– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಖೆ ವತಿಯಿಂದ ಇದೇ ಡಿಸೆಂಬರ್ 21 ರಂದು ನಡೆಯಲಿರುವ ರಾಷ್ಟೀಯ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಆರೋಗ್ಯ ಇಲಖೆ ಅಧಿಕಾರಿ ಹಾಗೂ ಸಿಬ್ಬಂದಿಗೆ ತರಬೇತಿ ಕಾರ್ಯಾಗಾರ ನಡೆಯಿತು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪಲ್ಸ್ ಪೋಲಿಯೋ ಲಸಿಕಾ ಹಾಗೂ ವಿ.ಪಿ.ಡಿ. ಸರ್ವಲೆನ್ಸ್ ಕುರಿತ ತರಬೇತಿ ಕಾರ್ಯಾಗಾರಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಅವರು ಗಿಡಕ್ಕೆ ನೀರೆರೆಯುವ ಮೂಲಕ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಕಾರ್ಯಗಾರವನ್ನು ಉದ್ದೇಶಿಸಿ ಮಾತನಾಡಿದ ಡಾ. ಚಿದಂಬರ ಅವರು ಎಲ್ಲರ ಸಹಕಾರದಿಂದ ಪೋಲಿಯೋ ನಿರ್ಮೂಲನೆಯನ್ನು ಮಾಡಿದ್ದೇವೆ. ನಮ್ಮ ದೇಶದಲ್ಲಿ 2011ರಲ್ಲಿ ಕೊನೆಯ ಪ್ರಕರಣ ವರದಿಯಾಗಿರುತ್ತದೆ. ತದನಂತರ 2014ರ ಮಾರ್ಚ್ 27 ರಂದು ಪೋಲಿಯೋ ಮುಕ್ತ ಭಾರತ ಎಂದು ವಿಶ್ವ ಆರೋಗ್ಯ ಸಂಸ್ಥೆ ಘೋ?ಣೆ ಮಾಡಿದೆ ಎಂದರು.

ಲಸಿಕೆಯಿಂದ ತಡೆಗಟ್ಟಬಹುದಾದ 12 ಖಾಯಿಲೆಗಳಿಗೆ ವ್ಯಾಕ್ಸಿನ್ ನೀಡುತ್ತಿದ್ದು, ಇದರಿಂದ ಮಗುವಿನ ರೋಗನಿರೋಧಕ ಶಕ್ತಿ ವೃದ್ಧಿಯಾಗಿ ಮಗು ಆರೋಗ್ಯವಾಗಿರುತ್ತದೆ. ಯಾವುದೇ ಒಂದು ಮಗುವು ಲಸಿಕೆಯಿಂದ ವಂಚಿತವಾಗದಂತೆ ಕ್ಷೇತ್ರಮಟ್ಟದಲ್ಲಿ ಕಾರ್ಯನಿರ್ವಹಿಸಬೇಕೆಂದು ಡಾ. ಚಿದಂಬರ ಅವರು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದ ವಿಶ್ವ ಆರೋಗ್ಯ ಸಂಸ್ಥೆಯ ಸಲಹೆಗಾರಾರು ಹಾಗೂ ಸರ್ವಲೆನ್ಸ್ ವೈದ್ಯಾಧಿಕಾರಿಯಾದ ಡಾ. ಸುಧೀರ್ ನಾಯಕ್ ಅವರು ಮಾತನಾಡಿ ಈಗ ಪೋಲಿಯೋ ಹಾಗೂ ನಿಯೋನೇಟಲ್, ಟೆಟಾನಸ್ ಖಾಯಿಲೆಯನ್ನು ನಿರ್ಮೂಲನೆಗೊಳಿಸಿದ್ದೇವೆ. ಕ್ಷೇತ್ರದಲ್ಲಿ ಮಕ್ಕಳಿಗೆ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಿ ಲಸಿಕೆ ನೀಡಬೇಕು ಎಂದರು.

ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯಾಧಿಕಾರಿ ಡಾ. ಎಂ.ಎಸ್. ರಾಜೇಶ್ ಕುಮಾರ್ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಜಿಲ್ಲಾ ಸರ್ವಲೆನ್ಸ್ ಅಧಿಕಾರಿ ಡಾ. ಸುಂದರೇಶ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಶ್ರೀನಿವಾಸ, ಡಾ. ಅಲೀಂ ಪಾಷ, ಡಾ. ತನುಜಾ, ಡಾ. ಪ್ರಕಾಶ್, ಡಾ. ಲೋಹಿತ್, ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ವೆಂಕಟೇಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿ ನಾಯಕ್, ಜಿಲ್ಲಾ ನರ್ಸಿಂಗ್ ಅಧಿಕಾರಿ ಮಣಿಯಮ್ಮ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಕರ್ನಾಟಕ ಕೇವಲ ಪ್ರವಾಸೋದ್ಯಮದ ಒಂದು ತಾಣವಲ್ಲ–ಒಂದು ರಾಜ್ಯ ಹಲವು ಜಗತ್ತು

## ಪ್ರವಾಸೋದ್ಯಮ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಸರ್ಕಾರ ಬದ್ಧ: ಹೆಚ್.ಕೆ.ಪಾಟೀಲ್

ಬೆಂಗಳೂರು:– ಕರ್ನಾಟಕ ಕೇವಲ ಒಂದು ಪ್ರವಾಸೋದ್ಯಮ ತಾಣವಲ್ಲ ಇದು "ಒಂದು ರಾಜ್ಯ, ಹಲವು ಜಗತ್ತು" ಎಂದು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರಾದ ಹೆಚ್.ಕೆ. ಪಾಟೀಲ್ ತಿಳಿಸಿದರು.

ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ಸಂಸ್ಕೃತಿ ರಾಜತಾಂತ್ರಿಕ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಪ್ರವಾಸೋದ್ಯಮದಲ್ಲಿ ಹೂಡಿಕೆ ಮಾಡಲು ವಿದೇಶಗಳಿಗೆ ನಮ್ಮ ರಾಜ್ಯವು ಮುಕ್ತ ಆಹ್ವಾನವನ್ನು ನೀಡಲಿದೆ. ಎಲ್ಲರನ್ನೂ ಒಳಗೊಂಡ ಪ್ರವಾಸೋದ್ಯಮ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ನಾವು ಬದ್ಧರಾಗಿದ್ದೇವೆ ಮತ್ತು ನಮ್ಮ ರಾಜ್ಯಕ್ಕೆ ಭೇಟಿ ನೀಡುವ ಪ್ರತಿಯೊಬ್ಬರಿಗೂ ಸುರಕ್ಷಿತ, ಆರಾಮದಾಯಕ, ಸ್ಮರಣೀಯ ಅನುಭವ ಮತ್ತು ಜ್ಞಾನೋದಯವನ್ನು ಒದಗಿಸುತ್ತದೆ. ನಾವು ಇದನ್ನು ಏಕಾಂಗಿಯಾಗಿ ಸಾಧಿಸಲು ಸಾಧ್ಯವಿಲ್ಲ ಮತ್ತು ಕರ್ನಾಟಕ ಸಾಂಸ್ಕೃತಿಕ ರಾಜತಾಂತ್ರಿಕ ಕೇಂದ್ರದಂತಹ ವೇದಿಕೆಯ ಮೂಲಕ ನಿಮ್ಮ ಪಾಲುದಾರಿಕೆಯನ್ನು ಬಯಸುತ್ತೇವೆ ಎಂದು ತಿಳಿಸಿದರು.

ಕರ್ನಾಟಕದ ಕಥೆಯನ್ನು ಸಮರ್ಥಿಸಿಕೊಳ್ಳಲು ರಾಜತಾಂತ್ರಿಕ ಸಮುದಾಯಬೇಕು. ರಾಷ್ಟ್ರೀಯ ದಿನಾಚರಣೆಯನ್ನು ಯೋಜಿಸುವಾಗ, ಕರ್ನಾಟಕವು ಸಹ ನಿಮ್ಮೊಂದಿಗೆ ಪಾಲುದಾರರಾಗಲು ಬಯಸುತ್ತದೆ. ಬರಹಗಾರರು ಮತ್ತು ಪ್ರಭಾವಿಗಳು ತಮ್ಮ ಮುಂದಿನ ಕಥೆಯನ್ನು ಹುಡುಕುತ್ತಿರುವಾಗ, ಅವರನ್ನು ನಮ್ಮ ಪಶ್ಚಿಮ ಘಟ್ಟಗಳಿಗೆ, ನಮ್ಮ ಪ್ರಾಚೀನ ಕಡಲತೀರಗಳಿಗೆ ಅಥವಾ ನಮ್ಮ ಪರಂಪರೆಯ ಸರ್ಕ್ಯೂಟ್‌ಗಳಿಗೆ ಕಳುಹಿಸಿ. ಮುಂದಿನ ಪೀಳಿಗೆಯ ಜಾಗತಿಕ ನಾಗರಿಕರು ನಮ್ಮ ಹಂಚಿಕೆಯ ಮೌಲ್ಯಗಳನ್ನು ಅರ್ಥಮಾಡಿಕೊಳ್ಳುವಂತಹ ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮಗಳನ್ನು ನಾವು ಅಭಿವೃದ್ಧಿಪಡಿಸೋಣ ಎಂದು ತಿಳಿಸಿದರು.

ಕರ್ನಾಟಕ ಹೂಡಿಕೆಗೆ ಮುಕ್ತ: ಹೂಡಿಕೆಗೆ ಕರ್ನಾಟಕವು ಮುಕ್ತವಾಗಿದೆ ಮತ್ತು ಸದಾ ಸಿದ್ಧವಾಗಿದೆ. ಕರ್ನಾಟಕವು ಜಗತ್ತನ್ನು ಸ್ವಾಗತಿಸಲು ಸದಾ ಉತ್ಸುಕವಾಗಿದೆ. ನಮ್ಮೊಂದಿಗೆ ಪಾಲುದಾರರಾಗಲು, ನಮ್ಮೊಂದಿಗೆ ನಡೆಯಲು ಮತ್ತು ಸಂತೋಷದಾಯಕ, ಹೆಚ್ಚು ಪ್ರಬುದ್ಧ ಮತ್ತು ಸಾಮರಸ್ಯದ ಜಗತ್ತನ್ನು ರಚಿಸಲು ಪ್ರವಾಸೋದ್ಯಮದ ಶಕ್ತಿಯನ್ನು ಬಳಸಲು ಮುಕ್ತವಾಗಿ ನಿಮ್ಮನ್ನು ಆಹ್ವಾನಿಸುತ್ತೇವೆ.

ಈ ಮೊದಲ ಕರ್ನಾಟಕ ಸಾಂಸ್ಕೃತಿಕ ರಾಜತಾಂತ್ರಿಕ ಕೇಂದ್ರದ ಸಮಾವೇಶ ಮತ್ತು ಕೆಸಿಸಿಡಿ ವಿಭಾಗದ ಸ್ಥಾಪನೆಯಲ್ಲಿ ಭಾಗವಹಿಸುವುದು ಒಂದು ವಿಶಿಷ್ಟ ಗೌರವ ಮತ್ತು ಜವಾಬ್ದಾರಿಯಾಗಿತ್ತು. ಇಂದು ನಾವು ಸಂಸ್ಕೃತಿಯ ಪಾಲಕರು, ಇತಿಹಾಸದ ನಿರೂಪಕರು ಮತ್ತು ಮಾನವ ಸಂಪರ್ಕದ ವಾಸ್ತುಶಿಲ್ಪಿಗಳಾಗಿ ಭೇಟಿಯಾಗುತ್ತಿರುವ ಸರ್ಕಾರಿ ಅಧಿಕಾರಿಗಳು, ರಾಜತಾಂತ್ರಿಕರು ಮತ್ತು ವ್ಯಾಪಾರ ನಾಯಕರಾಗಿ ಮಾತ್ರ ಭೇಟಿಯಾಗುತ್ತಿಲ್ಲ. ರಾಜ್ಯದಲ್ಲಿ ಹೊಸ ಅಧ್ಯಾಯವನ್ನು ತೆರೆಯಲಿದೆ ಎಂಬುದರಲ್ಲಿ ಸಂಶಯವಿಲ್ಲ.

ಪ್ರವಾಸೋದ್ಯಮ ಸಂತೋಷ, ಜ್ಞಾನೋದಯದ ಅನ್ವೇಷಣೆ: ಪ್ರವಾಸೋದ್ಯಮವು ಸಂತೋಷ, ತೃಪ್ತಿ ಮತ್ತು ಜ್ಞಾನೋದಯದ ಅನ್ವೇಷಣೆಯಾಗಿದೆ. ಪ್ರವಾಸೋದ್ಯಮವು ಜನರನ್ನು ಒಟ್ಟುಗೂಡಿಸುತ್ತದೆ, ಅಡೆತಡೆಗಳನ್ನು ಒಡೆಯುತ್ತದೆ ಮತ್ತು ಪ್ರಪಂಚದ ಬಗ್ಗೆ ನಮ್ಮ ತಿಳುವಳಿಕೆಯನ್ನು ಆಳಗೊಳಿಸುವ ಸಾಂಸ್ಕೃತಿಕ ವಿನಿಮಯವನ್ನು ಸಕ್ರಿಯಗೊಳಿಸುತ್ತದೆ. ಕರ್ನಾಟಕದಲ್ಲಿ, ಪ್ರವಾಸೋದ್ಯಮವನ್ನು ಸಂತೋಷ, ಕಲಿಕೆ ಮತ್ತು ಜ್ಞಾನೋದಯದ ಕ್ಷಣಗಳನ್ನು ಸೃಷ್ಟಿಸುವ ಸಾಧನವಾಗಿ ಬಳಸಲು ನಾವು ಬದ್ಧರಾಗಿದ್ದೇವೆ – ಪರಸ್ಪರ ಗೌರವ ಮತ್ತು ಹಂಚಿಕೆಯ ಅನುಭವಗಳ ಮೇಲೆ ಅಭಿವೃದ್ಧಿ ಹೊಂದುವ ಸಮಾಜವನ್ನು ನಿರ್ಮಿಸಲು ನಮಗೆ ಸಹಾಯ ಮಾಡುತ್ತದೆ. ಕರ್ನಾಟಕದಲ್ಲಿ, ಪ್ರವಾಸೋದ್ಯಮವು ಕೇವಲ ವಾಣಿಜ್ಯ ಚಟುವಟಿಕೆಯಲ್ಲ, ಆದರೆ ಸಾಮಾಜಿಕ ಒಳಿತಿಗಾಗಿ ಒಂದು ಶಕ್ತಿ ಎಂದು ನಾವು ನಂಬುತ್ತೇವೆ ಎಂದು ತಿಳಿಸಿದರು.

ಕನ್ನಡದಲ್ಲಿ ಒಂದು ಪ್ರಸಿದ್ಧ ಗಾದೆಯಂತೆ ?ದೇಶ ಸುತ್ತಿ ನೋಡು, ಕೋಶ ಓದು ಓದಿ ನೋಡು? ಅಂದರೆ ಪ್ರಯಾಣವು ಆತ್ಮವನ್ನು ಅನುಗ್ರಹದಿಂದ ತುಂಬುತ್ತದೆ. ಓದುವುದು ಮನಸ್ಸನ್ನು ಬುದ್ಧಿವಂತಿಕೆಯಿಂದ ಪೋಷಿಸುತ್ತದೆ. ಒಟ್ಟಾಗಿ, ಅವು ಮಾನವ ಪಾತ್ರವನ್ನು ಪರಿಷ್ಕರಿಸುತ್ತವೆ. ನಮ್ಮ ವೈವಿಧ್ಯತೆಗಳ ಹೊರತಾಗಿಯೂ, ನಮ್ಮ ಆಕಾಂಕ್ಷೆಗಳು ಒಂದೇ ಆಗಿರುತ್ತವೆ ಎಂಬುದನ್ನು ಅರ್ಥಮಾಡಿಕೊಳ್ಳಲು ಅವು ನಮಗೆ ಸಹಾಯ ಮಾಡುತ್ತವೆ. ಮಾನವ ಮತ್ತು ರಾಷ್ಟ್ರಗಳ ನಡುವೆ ಪರಸ್ಪರ ಗೌರವವನ್ನು ಬೆಳೆಸುವ ಸಾಧನವಾಗಿ ಪ್ರವಾಸೋದ್ಯಮವನ್ನು ನಾವು ನೋಡುತ್ತೇವೆ. "ಸಾಂಸ್ಕೃತಿಕ ರಾಜತಾಂತ್ರಿಕತೆ" ಎಂಬ ಪರಿಕಲ್ಪನೆಯು ಕರ್ನಾಟಕಕ್ಕೆ ಹೊಸದಲ್ಲ. ಇದು ನಮ್ಮ ಡಿಎನ್‌ಎಯಲ್ಲಿದೆ ಮತ್ತು ನಮ್ಮ ಸಾಂಸ್ಕೃತಿಕ ಪರಂಪರೆಯ ಪ್ರಮುಖ ಭಾಗವಾಗಿದೆ ಎಂದು ತಿಳಿಸಿದರು.

ಕರ್ನಾಟಕವು 12 ನೇ ಶತಮಾನದ ಮಹಾನ್ ತತ್ವಜ್ಞಾನಿ ಮತ್ತು ವಿಶ್ವದ ಮೊದಲ ಸಂಸತ್ತು ಅನುಭವ ಮಂಟಪವನ್ನು ಸ್ಥಾಪಿಸಿದ ಸಮಾಜ ಸುಧಾರಕ ಭಗವಾನ್ ಬಸವೇಶ್ವರರ ಭೂಮಿಯಾಗಿದೆ. ಅವರು ಶತಮಾನಗಳ ಹಿಂದೆಯೇ ನಮಗೆ ಪ್ರಜಾಪ್ರಭುತ್ವ, ಸಮಾನತೆ ಮತ್ತು ಸಂವಾದದ ಮೌಲ್ಯಗಳನ್ನು ಕಲಿಸಿದರು.

ಕರ್ನಾಟಕವು ನಮ್ಮ ರಾಷ್ಟ್ರಕವಿ ಕುವೆಂಪು ಅವರ ನಾಡು, ಅವರು ವಿಶ್ವಮಾನವ ಅಂದರೆ "ವಿಶ್ವಮಾನವ" ಎಂಬ ಪರಿಕಲ್ಪನೆಯನ್ನು ನಮಗೆ ನೀಡಿದರು. ಪ್ರತಿಯೊಂದು ಮಗುವೂ ಸಾರ್ವತ್ರಿಕ ಜೀವಿಯಾಗಿ ಹುಟ್ಟುತ್ತದೆ ಮತ್ತು ಸಮಾಜವು ಅವರನ್ನು ಅವರ ಸಾಮರ್ಥ್ಯವನ್ನು ನಿಬರ್ಂಧಿಸುವ ಪೆಟ್ಟಿಗೆಗಳಲ್ಲಿ ಇರಿಸುತ್ತದೆ ಎಂದು ಅವರು ನಮಗೆ ಕಲಿಸಿದರು. ಅವರನ್ನು ಮತ್ತೆ ಆ ಸಾರ್ವತ್ರಿಕ ಮನುಷ್ಯನಾಗಿ ಬೆಳೆಯಲು ಸಹಾಯ ಮಾಡುವುದು ನಮ್ಮ ಕರ್ತವ್ಯವಾಗಿದೆ ಎಂದು ತಿಳಿಸಿದರು.

ನಮ್ಮ ರಾಜತಾಂತ್ರಿಕ ಇತಿಹಾಸದಲ್ಲಿ ಒಂದು ಐತಿಹಾಸಿಕ ಕ್ಷಣವೆಂದರೆ ನಂದಿ ಬೆಟ್ಟದಲ್ಲಿ ನಡೆದ ಸಾರ್ಕ್ ಸಮಾವೇಶ. ನಮ್ಮ ನೆರೆಯ ರಾಷ್ಟ್ರಗಳ ನಾಯಕರು ಅಲ್ಲಿ ಒಟ್ಟುಗೂಡಿದರು. ಅವರು ಕಟ್ಟುನಿಟ್ಟಾದ ಬೋರ್ಡ್ ರೂಂನಲ್ಲಿ ಭೇಟಿಯಾಗಲಿಲ್ಲ, ಆದರೆ ಮೋಡಗಳು, ನಂದಿ ಬೆಟ್ಟದ ಪ್ರಕೃತಿ ಮತ್ತು ಪರಂಪರೆಯ ಮಧ್ಯದಲ್ಲಿ ಭೇಟಿಯಾದರು. ಪ್ರಕೃತಿ ಮತ್ತು ಪರಂಪರೆಯಿಂದ ಸುತ್ತುವರೆದಿರುವ ಆ ವಾತಾವರಣವು ಗಡಿಗಳನ್ನು ಮೃದುಗೊಳಿಸಿತು. ಔಪಚಾರಿಕ ವಾತಾವರಣವು ಸಾಮಾನ್ಯವಾಗಿ ಸಾಧಿಸಲು ಹೆಣಗಾಡುವ ಸಂವಾದಕ್ಕೆ ಇದು ಅವಕಾಶ ಮಾಡಿಕೊಟ್ಟಿತು.

# ಮಂಡ್ಯದಲ್ಲಿ ಕೃಷಿ ಮೇಳಕ್ಕೆ ಸಿದ್ದರಾಮಯ್ಯ ಚಾಲನೆ

ಅಂತರಾಷ್ಟ್ರೀಯ ಸ್ಯಾಂಡ್ವಿಚ್ ಸ್ನಾತಕೋತರ ಪದವಿಯನ್ನು ತೆರೆಯಲು ಕೃಷಿ ವಿಜ್ಞಾನಿಗಳು ಬೇಡಿಕೆ ಇಟ್ಟಿದ್ದಾರೆ ಸದರಿಯ ಸ್ನಾತಕೋತರ ಪದವಿಯನ್ನು ತೆರೆಯಲು ಪ್ರಯತ್ನ ಪಡುತ್ತೇನೆ. ಕೃಷಿಯ ಕುರಿತಾಗಿ ನನಗೆ ಅಪಾರವಾದ ಕಾಳಜಿ ಇದೆ ನಮ್ಮ ದೇಶದ ಜಿಡಿಪಿಗೆ ಕೃಷಿ ವಲಯ ಹೆಚ್ಚು ಶ್ರಮಿಸುತ್ತಿದೆ. ಎಂದರು.

ಎಲ್ಲ ಜಾತಿ ಧರ್ಮಗಳಲ್ಲೂ ಬಡವರು ಹಾಗೂ ಕೃಷಿಕರು ಇದ್ದಾರೆ ಎಲ್ಲರಲ್ಲೂ ಸಮಾನತೆ ಬರಬೇಕು. ಡಾ. ಬಿ.ಆರ್ ಅಂಬೇಡ್ಕರ್ ಅವರು ಹೇಳಿದಂತೆ ಎಲ್ಲಾ ಸಮಾಜದಲ್ಲೂ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಸಮಾನತೆ ಬಂದಾಗ ಮಾತ್ರ ಅಸಮಾನತೆಯನ್ನು ಓಡಿಸಬಹುದು. ಸಮಾಜದಲ್ಲಿ ಅನ್ಯಾಯ ಕೊಳಗಾದ ಶೋಷಿತ ಸಮುದಾಯಗಳ ಮಹಿಳೆಯರ, ದೀನ ದುರ್ಬಲರನ್ನು ಸರಿದೂಗಿಸಲು ನಮ್ಮ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ನೀಡುತ್ತಾ ಬಂದಿದ್ದೇವೆ ಎಂದು ಹೇಳಿದರು.

ನಮ್ಮ ಸರ್ಕಾರ ರೈತರ ಪರವಾಗಿ ಇರುತ್ತದೆ ರೈತರನ್ನು ಸಬಲೀಕರಣ ಮಾಡುವುದು ನಮ್ಮ ಉದ್ದೇಶ. ರಾಜ್ಯದ ಸರ್ಕಾರಿ ಸ್ವಾಮ್ಯದಲ್ಲಿರುವ ಏಕೈಕ ಸಕ್ಕರೆ ಕಾರ್ಖಾನೆ, ಮೈ ಶುಗರ್ ಅನ್ನು ಉಳಿಸಿಕೊಳ್ಳಲು ರಾಜ್ಯ ಸರ್ಕಾರ 50 ಕೋಟಿ ಹಣವನ್ನು ನೀಡಿದೆ. ಮೈ ಶುಗರ್ ಸಕ್ಕರೆ ಕಾರ್ಖಾನೆಯ ವಿದ್ಯುತ್ ಬಿಲ್ಲನ್ನು ಮನ್ನಾ ಮಾಡಿದೆ. ಮೈ ಶುಗರ್ ಕಾರ್ ಕಾರ್ಖಾನೆ ಹೊಸ ಬಾಯ್ಲಿಂಗ್ ಹೌಸ್ ನೀಡಲಾಗುವುದು ಎಂದರು.

ನಮ್ಮ ಸರ್ಕಾರ ರಾಜ್ಯದ ಜನರ ಅಭಿವೃದ್ಧಿಗಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ ಮಂಡ್ಯ ಜಿಲ್ಲೆಯ 18 ಕೋಟಿ ಜನ ಮಹಿಳೆಯರು ಶಕ್ತಿ ಯೋಜನೆ ಅಡಿ ಪ್ರಯಾಣ ಬೆಳೆಸಿದ್ದಾರೆ. ಜಿಲ್ಲೆಯ 4 ಲಕ್ಷಕ್ಕೂ ಹೆಚ್ಚು ಮನೆಗಳಿಗೆ ವಿದ್ಯುತ್ ನ್ನು ಉಚಿತವಾಗಿ ನೀಡಲಾಗುತ್ತಿದೆ. ನಮ್ಮ ರಾಜ್ಯದ ಕಬ್ಬು ಹಾಗೂ ಹೊರ ರಾಜ್ಯದ ಕಬ್ಬಿನ ಗುಣಮಟ್ಟದಲ್ಲಿ ವ್ಯತ್ಯಾಸವಿದೆ, ಮಂಡ್ಯ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯ ಇದರ ಕುರಿತಾಗಿ ಸಂಶೋಧನೆಯನ್ನು ನಡೆಸಿ ಕಬ್ಬಿನ ಗುಣಮಟ್ಟ ಹೆಚ್ಚಿಸಿ ಎಂದು ಹೇಳಿದರು.

ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರು ಅಧ್ಯಕ್ಷತೆವಹಿಸಿ ಮಾತನಾಡಿ ಈ ಭಾಗಕ್ಕೆ ವಿಶ್ವವಿದ್ಯಾಲಯ ನೀಡಿರುವುದಕ್ಕೆ ಮುಖ್ಯಮಂತ್ರಿಗಳಿಗೆ ಕೃತಜ್ಞತೆ ತಿಳಿಸಿದರು. ಮಣ್ಣಿನ ಗುಣಮಟ್ಟವನ್ನು ಕಾಪಾಡುವ ಹಾಗೂ ಕಡಿಮೆ ನೀರು ಬಳಕೆ ಮಾಡಿ ಹೆಚ್ಚು ಇಳುವರಿ ಪಡೆಯಬಹುದು. ಕೃಷಿ ಮೇಳದಲ್ಲಿ ಅನೇಕ ಹೊಸ ತಳಿಯ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ ಇದನ್ನು ರೈತರು ತಮ್ಮ ಬೇಸಾಯದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ರೈತರ ಜೀವನವನ್ನು ಸುಧಾರಿಸುವುದು ಬಹಳ ಮುಖ್ಯ. ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಹೆಚ್ಚಿನ ಪ್ರಶಸ್ತ್ಯ ನೀಡಬೇಕು . ರೈತರು ಸಮಗ್ರ ಕೃಷಿ ಜೊತೆಗೆ ಉಪ ಉತ್ಪನ್ನ ಮಾಡುವುದು ತಾವು ಉತ್ಪಾದಿಸಿದ ಉತ್ಪನ್ನಗಳಿಗೆ ಮೌಲ್ಯವರ್ಧನೆ ಮಾಡಿ ಹೆಚ್ಚಿನ ಲಾಭ ಗಳಿಸಬೇಕು ಎಂದರು.

ಮಂಡ್ಯ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯದ ಅಭಿವೃದ್ಧಿ ಪಡಿಸಿದ ಐದು ಕೃಷಿ ತಳಿಗಳನ್ನು ಮತ್ತು 9 ತಾಂತ್ರಿಕತೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲೋಕಾರ್ಪಣೆ ಮಾಡಿದರು. ಮೇಲುಕೋಟೆ ವಿಧಾನ ಸಭಾ ಕ್ಷೇತ್ರದ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರು ಕೃಷಿ ಕ್ಯಾಲೆಂಡರ್ ಅನ್ನು ಬಿಡುಗಡೆಗೊಳಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ರವಿಕುಮಾರ್, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ಎ.ಬಿ. ರಮೇಶ್ ಬಂಡಿಸಿದ್ದೇಗೌಡ, ಮೇಲುಕೋಟೆ ವಿಧಾನ ಸಭಾ ಕ್ಷೇತ್ರದ ಶಾಸಕ ದರ್ಶನ್ ಪುಟ್ಟಣ್ಣಯ್ಯ, ವಿಧಾನ ಪರಿಷತ್ ಸದಸ್ಯ ಮಧು ಜಿ ಮಾದೇಗೌಡ, ಮೈ ಶುಗರ್ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಸಿ.ಡಿ ಗಂಗಾಧರ, ಮಂಡ್ಯ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯದ ವಿಶೇಷಾಧಿಕಾರಿ ಡಾ.ಕೆ.ಎಂ ಹರಿಣಿ ಕುಮಾರ್, ರಾಜ್ಯ ಸಣ್ಣ ಕೈಗಾರಿಕೆಗಳ ಉಪಾಧ್ಯಕ್ಷೆ ವಿಜಯಲಕ್ಷ್ಮಿ ರಘುನಂದನ್, ಎಂ.ಡಿ.ಸಿ.ಸಿ ಬ್ಯಾಂಕ್ ಅಧ್ಯಕ್ಷ ಸಚಿನ್ ಚಲುವರಾಯಸ್ವಾಮಿ, ಜಿಲ್ಲಾಧಿಕಾರಿ ಡಾ.ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್ ನಂದಿನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

1ನೇ ಪುಟದಿಂದ....

## ಮಂಡನೆಗೆ ತಯಾರಿ

ನಿರ್ವಹಿಸಬೇಕು. ಹಿಂದಿನ ವರ್ಷಗಳ ಅಂಕಿ ಅಂಶಗಳನ್ನು ಬಳಸಿಕೊಂಡು, ತಂತ್ರಜ್ಞಾನದ ಸಮರ್ಪಕ ಬಳಕೆ ಮಾಡಿ, ಅನಾಲಿಸಿಸ್ ವಿಭಾಗವನ್ನು ಬಲಪಡಿಸಬೇಕು.

ಬೋಗಸ್ ಇನ್ಪುಟ್ ಟ್ಯಾಕ್ಸ್ ಕ್ರೆಡಿಟ್ ಪ್ರಕರಣಗಳ ಮೇಲೆ ನಿಗಾ ಇರಿಸಿ ಅಂತಹ ಪ್ರಕರಣಗಳಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಕಾನೂನು ಕ್ರಮ ಜರುಗಿಸಲು ಸೂಚನೆ ನೀಡಿದರು.

ಅಬಕಾರಿ ತೆರಿಗೆ: 2025–26 ನೇ ಹಣಕಾಸು ಸಾಲಿನಲ್ಲಿ ರೂ. 43ಸಾವಿರ ಕೋಟಿ ಅಬಕಾರಿ ತೆರಿಗೆ ಗುರಿಯನ್ನು ನಿಗದಿಪಡಿಸಲಾಗಿದ್ದು, ನವೆಂಬರ್‌ರೆಗೆ ರೂ.26,215 ಅಂತ್ಯದವರೆಗೆ ರೂ. ಕೋಟಿ ಸಂಗ್ರಹಿಸಲಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಅಬಕಾರಿ ತೆರಿಗೆ ಸಂಗ್ರಹದಲ್ಲಿ ಶೇ.10.46ರಷ್ಟು ಬೆಳವಣಿಗೆ ದರವನ್ನು ಸಾಧಿಸಲಾಗಿದೆ.

ನಿಗದಿತ ಗುರಿಯನ್ನು ಸಾಧಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

## ದಿನೇಶ್ ಗುಂಡೂರಾವ್

ಎಳೆದುಕೊಂಡು ಬರ್ತಾ ಇದ್ದೀರಿ, ಸಿಎಂ ಆಗುವ ಆಸೆ ಎಲ್ಲರಿಗೂ ಇರುತ್ತದೆ. ನನಗೂ ಆಸೆ ಇದೆ. ಆದರೆ, ಸಮಯ ಸಂದರ್ಭ ಎಲ್ಲವನ್ನೂ ಕೂಡ ತೀರ್ಮಾನ ಮಾಡುತ್ತದೆ. ಈಗ ಯಾಕೆ ಎಂದು ಉತ್ತರಿಸಿದರು.

ವಿಪಕ್ಷ ಬಿಜೆಪಿ ಸಂಪೂರ್ಣ ಕೆಲಸ ಮಾಡುತ್ತಿಲ್ಲ. ಕೇವಲ ಭಾಷಣ ಮಾಡಲು ವಿಜಯೇಂದ್ರ, ಅಶೋಕ್, ಪ್ರಹ್ಲಾದ್ ಜೋಶಿ ಬ್ಯುಸಿ ಇದ್ದಾರೆ. ರಾಜ್ಯದ ರೈತರ ಸಮಸ್ಯೆಗಳನ್ನು ಕೇಂದ್ರ ಸರ್ಕಾರದ ಗಮನಕ್ಕೆ ತರುವಲ್ಲಿ ಬಿಜೆಪಿ ಸಂಸದರು ವಿಫಲರಾಗಿದ್ದಾರೆ. ಇವರಿಗೆ ಜವಾಬ್ದಾರಿ ಇಲ್ಲವೇ ಎಂದರು. ಬಿಜೆಪಿ ರೀತಿ ನಮ್ಮಲ್ಲಿ ಯಾವುದೇ ಗೊಂದಲಗಳು ಕಿತ್ತಾಟಗಳು ಇಲ್ಲ. ಸದಾನಂದ ಗೌಡ ಹಾಗೂ ಜಗದೀಶ್ ಶೆಟ್ಟರ್ ಸಿಎಂ ಆದಾಗ ಬಿಜೆಪಿಯಲ್ಲಿ ಆದ ಕಿತ್ತಾಟ ನಮ್ಮಲ್ಲಿ ಇಲ್ಲ, ಎಲ್ಲರೂ ಒಟ್ಟಾಗಿ ಕೂತು ಎಲ್ಲವನ್ನು ಬಗೆ ಹರಿಸಿಕೊಳ್ಳುತ್ತೇವೆ. ನಮ್ಮಲ್ಲಿ ಯಾವುದೇ ಗೊಂದಲವಿಲ್ಲ ಎಂದು ಸಮರ್ಥಿಸಿಕೊಂಡರು.

## ಎನ್.ಚಲುವರಾಯಸ್ವಾಮಿ

1939 ರಲ್ಲಿ ಮೊದಲು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು 630 ಎಕ್ಕರೆ ಜಾಗದಲ್ಲಿ ಮಂಡ್ಯದಲ್ಲಿ ಕೃಷಿ ವಿಜ್ಞಾನಿಗಳ ಸಂಶೋಧನಾ ಕೇಂದ್ರವನ್ನು ತೆರೆದರು. ನಂತರ ರಾಜ್ಯದ 4 ಭಾಗದಲ್ಲಿ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಲಾಯಿತು. ರಾಜ್ಯದ ಎಲ್ಲಾ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯದ ಉತ್ತಮ ಕೊಡುಗೆ ಹಾಗೂ ಕಾರ್ಯ ಮಾಡುತ್ತ ಮುಂದೆ ಸಾಗುತ್ತಿವೆ ಎಂದು ಅಭಿಪ್ರಾಯಪಟ್ಟರು.

ಮಂಡ್ಯ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯದ ರಾಜ್ಯದ 5ನೇ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯವಾಗಿ ಹೊರಹೊಮ್ಮಿದೆ. ಮಂಡ್ಯ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯದ ಸ್ಥಾಪನೆಯಾದ ಮೊದಲ ವರ್ಷದಲ್ಲೇ ಯು.ಜಿ.ಸಿ ಮಾನ್ಯತೆ ಪಡೆದಿದೆ. ಶಿವಮೊಗ್ಗ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯಕ್ಕೆ 2008 ರಲ್ಲಿ ಅನುಮತಿ ದೊರೆತಿತ್ತು ಆದರೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾದ 2013 ರ ಅವಧಿಯಲ್ಲಿ ಶಿವಮೊಗ್ಗ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಲಾಯಿತು ಎಂದು ಹೇಳಿದರು.

ಬೆಳಗಾವಿಯಲ್ಲಿ ಆದ ಬೆಳೆ ನಾಶಕ್ಕೆ ಎನ್ ಡಿ ಆರ್ ಎಫ್ ಪರಿಹಾರದ ಮೊತ್ತದ ಜೊತೆಗೆ ರಾಜ್ಯ ಸರ್ಕಾರ ಪರಿಹಾರವನ್ನು ನೀಡಿತು. ರಾಜ್ಯ ಕಬ್ಬು ಬೆಳೆಗಾರರ ಆರ್ಥಿಕ ಅಭಿವೃದ್ಧಿಗಾಗಿ ಟನ್ ಕಬ್ಬಿಗೆ ರೂ.50 ಅನ್ನು ಸರ್ಕಾರ ನೀಡುತ್ತಿದೆ. ರಾಜ್ಯ ಸರ್ಕಾರ ಬಡವರು, ರೈತರು, ಶ್ರಮಿಕರು, ಮಹಿಳೆಯರು ಮತ್ತು ಶೋಷಿತ ಸಮುದಾಯದ ಅಭಿವೃದ್ಧಿಗಾಗಿ ಶ್ರಮಿಸುತ್ತಿದ್ದಾರೆ ಎಂದರು.

ರಾಜ್ಯ ಸರ್ಕಾರ ರಾಜ್ಯದ ಜನರನ್ನು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸದೃಢರನ್ನಾಗಿ ಮಾಡಲು ಅನೇಕ ಯೋಜನೆಗಳನ್ನು ನೀಡಿಕೊಂಡು ಬರುತ್ತಿದೆ. ರೈತರನ್ನು ಆರ್ಥಿಕವಾಗಿ ಸಫಲರನ್ನಾಗಿಸಲು ಕೃಷಿ ಮೇಳವನ್ನು ಆಯೋಜಿಸಲಾಗಿದೆ. ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯದ ಮಹತ್ವ ಎಲ್ಲರಿಗೂ ಮುಂದಿನ ದಿನಗಳಲ್ಲಿ ತಿಳಿಯುತ್ತದೆ ಎಂದು ತಿಳಿಸಿದರು.

ಫಿಲಿಪೈನ್ಸ್ ಅಂತರಾಷ್ಟ್ರೀಯ ರೈಸ್ ರಿಸರ್ಚ್ ಸೆಂಟರ್ ನೊಂದಿಗೆ ಒಡಂಬಡಿಕೆ ಮಾಡಿಕೊಂಡು ರೋಗನಿರೋಧಕ ಭತ್ತದ ತಳಿಗಳನ್ನು ನಮ್ಮಲ್ಲಿ ಬೆಳೆಯಲಾಗುವುದು. ಮಂಡ್ಯ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯದ ಪೀಠೋಪಕರಣಗಳ ಅಭಿವೃದ್ಧಿಗಾಗಿ ರೂ 100 ಕೋಟಿ ಮಾನ್ಯ ಮುಖ್ಯಮಂತ್ರಿಗಳು ಮಂಜೂರು ಮಾಡಿದ್ದಾರೆ. ಜಿಲ್ಲೆಯ ಜನತೆ ಹೇಗೆ ಕೃಷಿಯನ್ನು ಲಾಭದಾಯಕವಾಗಿ ಮಾಡಬೇಕು ಎಂಬುದರ ಕುರಿತಾಗಿ ಕೃಷಿ ಮೇಳ ಆಯೋಜಿಸಲಾಗಿದೆ ರೈತರು ಇದರಲ್ಲಿ ಭಾಗವಹಿಸಿ ಕೃಷಿ ಮೇಳದ ಸದುಪಯೋಗವನ್ನು ಪಡೆದುಕೊಳ್ಳಬಹುದಾಗಿದೆ ಎಂದರು.

## ಕಡಿವಾಣ: ಪರಮೇಶ್ವರ್

ತೊಂದರೆ ಆಗದಂತೆ ನಾಗರೀಕರಿಗೆ ಕೇಂದ್ರಕೃರಾಗಿರಬೇಕು. ಸಮಾಜದಲ್ಲಿ ಯಾವುದೇ ಅಹಿತಕರ ಘಟನೆ ನಡೆಯಬಾರದು ಎನ್ನುವ ಉದ್ದೇಶದಿಂದ ಕೆಲಸ ಮಾಡುತ್ತಿದ್ದು ಹೊಸ ಹೊಸ ಅವಿಷ್ಕಾರಗಳನ್ನು ಜಾರಿಗೆ ತಂದಿದ್ದು, ಅನೇಕ ಬದಲಾವಣೆಗಳನ್ನು ಮಾಡಿದ್ದೇವೆ. ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಲ್ಲಿ ಅನ್ಯರಿಗೆ ತೊಂದರೆ ಆಗದೆ ಅಪರಾಧ ಮಾಡಿದವರಿಗೆ ಸೀಮಿತವಾಗಿರಬೇಕು. ಬದಲಾದ ಯುಗದಲ್ಲಿ ತಾಂತ್ರಕತೆ ಉಪಯೋಗಿಸಿಕೊಂಡು ಅಪರಾಧ ಕಂಡು ಹಿಡಿಯುವ ರೀತಿಯಲ್ಲಿ ಕಳೆದ ಎರಡು ವರ್ಷಗಳಿಂದ ಕೆಲಸ ಮಾಡುತ್ತಿದ್ದೇವೆ ಎಂದರು.

## ವಿದ್ಯುತ್ ವ್ಯತ್ಯಯ

ಮೈಸೂರು:–ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವತಿಯಿಂದ 220/66/11 ಕೆ.ವಿ ಕಡಕೊಳ ವಿದ್ಯುತ್ ಸ್ವೀಕರಣಾ ಕೇಂದ್ರದಲ್ಲಿ ಕ.ವಿ.ಪ್ರ.ನಿ.ನಿ. ವತಿಯಿಂದ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿರುವುದರಿಂದ ಡಿಸೆಂಬರ್ 07 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಕಡಕೊಳ, ಕೆ.ಐ.ಎ.ಡಿ.ಬಿ ಇಂಡಸ್ಟ್ರಿಯಲ್ ಏರಿಯಾ, ಬ್ಯಾತಹಳ್ಳಿ, ಸಿಂಧುವಳ್ಳಿ, ದಡದಹಳ್ಳಿ, ದೊಡ್ಡಕಾನ್ಯ, ಚಿಕ್ಕಕಾನ್ಯ, ಮರಸೆ, ಮಾಕನಹುಂಡಿ, ಕೂಡನಹಳ್ಳಿ, ಕೋಚನಹಳ್ಳಿ, ವಿಮಾನ ನಿಲ್ದಾಣ, ಬಿರೇಗೌಡನಹುಂಡಿ, ಕೆ.ಎಂ. ಹುಂಡಿ, ಬಿ.ಜಿ. ಹುಂಡಿ, ಕೆ.ಎನ್. ಹುಂಡಿ, ಆಯರಹಳ್ಳಿ, ಕಿರಾಳು, ದೂರ, ಮುರುಡಗಳ್ಳಿ, ತಳೂರು, ಡಿ. ಕಾಟೂರು, ಟಿ.ವಿ.ಎಸ್. ಫ್ಯಾಕ್ಟರಿ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕೆಂದು ಚಾ.ವಿ.ಸ.ನಿ.ನಿ.ಯ ನ.ರಾ.ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ತಿಳಿಸಿದ್ದಾರೆ.

ಸಂಕ್ಷಿಪ್ತ ಸುದ್ದಿ

## ಪರಿಸರ ಜಾಗೃತಿ



ಹನಗೋಡು : ಮುಂದಿನ ಪೀಳಿಗೆಗಳಿಗೆ ಪರಸರ ಸಂರಕ್ಷಣೆ ಹಾಗೂ ಅರಣ್ಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸುವುದೇ ಚಿಣ್ಣರ ವನ ದರ್ಶನ ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದು ಹುಣಸೂರು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಲಕ್ಷ್ಮೀಕಾಂತ್ ತಿಳಿಸಿದರು.

ಹನಗೋಡು ಹೋಬಳಿ ನೇರಳಕುಪ್ಪೆ ಸರ್ಕಾರಿ ಪ್ರೌಢಶಾಲೆಯ ಮಕ್ಕಳಿಗೆ ಅರಣ್ಯ ಇಲಾಖೆವತಿಯಿಂದ ಏರ್ಪಡಿಸಿದ್ದ ಚಿಣ್ಣರ ವನದರ್ಶನ ಕಾರ್ಯಕ್ರಮಕ್ಕೆ ಶುಕ್ರವಾರ ಚಾಲನೆ ನೀಡಿ ಮಾತನಾಡಿ ಅರಣ್ಯ, ವನ್ಯಜೀವಿ ಸಂಕುಲ ಸಂರಕ್ಷಣೆ, ಮಾಲಿನ್ಯ ಮುಕ್ತ ಪರಿಸರ, ಭವಿಷ್ಯಕ್ಕೆ ಅರಣ್ಯಗಳ ಉಳಿವು ಅತ್ಯವಶ್ಯಕ ಎಂಬ ಅರಿವನ್ನು ವಿದ್ಯಾರ್ಥಿಗಳಿಗೆ ಮೂಡಿಸುವುದು, ಪ್ರತಿಯೊಬ್ಬರನ್ನು ಭವಿಷ್ಯದ ಪರಿಸರಸ್ನೇಹಿ ನಾಗರಿಕರನ್ನಾಗಿ ರೂಪಿಸುವ ದೃಷ್ಟಿಯಿಂದ ಶಾಲಾ ಮಕ್ಕಳಿಗೆ ಅರಿವು ಮೂಡಿಸುವುದು ಯೋಜನೆಯ ಉದ್ದೇಶವಾಗಿದ್ದು, ಸಸ್ಯ ಸಂಕುಲಗಳು ಮನುಷ್ಯನ ಅಸ್ತಿತ್ವ ಮತ್ತು ಜೀವ ಜಲದ ಮೂಲಗಳೇ ಹೊರತು ಆದಾಯದ ಮೂಲವಲ್ಲ ಎಂಬ ಅರಿವು ವಿದ್ಯಾರ್ಥಿಗಳಲ್ಲಿ ಮೂಡಲು ಚಿಣ್ಣರ ವನದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು.

ಆರ್.ಎಫ್.ಓ ಸುಬ್ರಮಣ್ಯ ಮಾತನಾಡಿ, ಪ್ರತಿ ವರ್ಷ ಸರ್ಕಾರಿ ಶಾಲಾ ಮಕ್ಕಳಿಗೆ ಅರಣ್ಯ ಇಲಾಖೆ ವತಿಯಿಂದ ಈ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಪ್ರಸ್ತುತ ವರ್ಷ ನೇರಳಕುಪ್ಪೆ ಪ್ರೌಢಶಾಲೆಯ 50 ವಿದ್ಯಾರ್ಥಿಗಳಿಗೆ ಈ ಅವಕಾಶ ಕಲ್ಪಿಸಲಾಗಿದೆ. ಇಂತಹ ಕಾರ್ಯಕ್ರಮಗಳಿಂದ ವಿದ್ಯಾರ್ಥಿಗಳಿಗೆ ಅರಣ್ಯದ ಬಗ್ಗೆ ತಿಳುವಳಿಕೆ ಮೂಡಿಸಲು ಅರಣ್ಯ ಉಳಿಸುವ ಮತ್ತು ಬೆಳೆಸುವ ಬಗ್ಗೆ ಅರಿವು ಮೂಡಿಸಲು ಸಹಾಯಕಾರಿಯಾಗಲಿದೆ ಎಂದು ತಿಳಿಸಿ ಪ್ರವಾಸದಲ್ಲಿ ಕೈಗೊಂಡ ಎಲ್ಲಾ ವಿದ್ಯಾರ್ಥಿಗಳಿಗೆ ಅರಣ್ಯ ಮಹತ್ವದ ಕೈಪಿಡಿ ಹಾಗೂ ಬ್ಯಾಗ್ ಗಳನ್ನು ಕೊಡುಗೆಯಾಗಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯಶಿಕ್ಷಕ ಕುಮಾರಸ್ವಾಮಿ, ಡಿಆರ್ ಎಫ್ ಓ ಪ್ರಮೋದ್, ಸೇರಿದಂತೆ ಸಹಶಿಕ್ಷಕರು, ಅರಣ್ಯ ಇಲಾಖೆ ಸಿಬ್ಬಂದಿಗಳು ಭಾಗವಹಿಸಿದ್ದರು.

## ಆರ್ಥಿಕ ಸೌಲಭ್ಯಕ್ಕೆ ಆನ್‌ಲೈನ್ ಅರ್ಜಿ ಆಹ್ವಾನ

ರಾಮನಗರ:- ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಮಹಿಳೆಯರು ಸ್ವಯಂ ಉದ್ಯೋಗ ಕೈಗೊಳ್ಳಲು 2025-26ನೇ ಸಾಲಿನಲ್ಲಿ ವಿವಿಧ ಯೋಜನೆಯಡಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಉದ್ಯೋಗಿನಿ ಯೋಜನೆ:- ಮಹಿಳೆಯರು ಆದಾಯ ಉತ್ಪನ್ನಕರ ಚಟುವಟಿಕೆಗಳಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ 3 ಲಕ್ಷ ದವರೆಗೆ ಸಾಲ ಮತ್ತು ನಿಗಮದಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಶೇ. 50% ರಷ್ಟು ಸಹಾಯಧನ ಹಾಗೂ ಸಾಮಾನ್ಯ ವರ್ಗದವರಿಗೆ ಶೇ. 30% ರಷ್ಟು ಸಹಾಯಧನ ನೀಡಲಾಗುವುದು. ವಯೋಮಿತಿ 18 ರಿಂದ 55 ವರ್ಷ.

ಚೇತನ ಯೋಜನೆ:- ಧಮನಿತ ಮಹಿಳೆಯರಿಗೆ ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು 30,000 ರೂ.ಗಳ ಪ್ರೋತ್ಸಾಹಧನ ನೀಡಲಾಗುತ್ತದೆ. ವಯೋಮಿತಿ 18 ವರ್ಷ ಮೇಲ್ಪಟ್ಟಿರಬೇಕು. ಫಲಾನುಭವಿಯು ಸಮುದಾಯ ಆಧಾರಿತ ಸಂಸ್ಥೆಯಲ್ಲಿ ನೊಂದಣಿಯಾಗಿರಬೇಕು.

ಧನಶ್ರೀ ಯೋಜನೆ:- ಮಹಿಳೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ರೂ. 30,000 ಪ್ರೋತ್ಸಾಹಧನ ನೀಡಲಾಗುತ್ತದೆ. ವಯೋಮಿತಿ 18 ರಿಂದ 60 ವರ್ಷಗಳು. ಫಲಾನುಭವಿಯು ಎ.ಆರ್.ಟಿ ಕೇಂದ್ರ ಸರ್ಕಾರಿ ಆಸ್ಪತ್ರೆಯಲ್ಲಿ ನೋಂದಣಿಯಾಗಿರಬೇಕು.

ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ:- ಆದಾಯ ಉತ್ಪನ್ನ ಕೈಗೊಳ್ಳಲು ರೂ. 30,000 ಪ್ರೋತ್ಸಾಹಧನ ನೀಡಲಾಗುತ್ತದೆ. ಫಲಾನುಭವಿಯು ಸಮುದಾಯ ಆಧಾರಿತ ಸಂಸ್ಥೆಯಲ್ಲಿ ನೋಂದಣಿಯಾಗಿರಬೇಕು.

ಅರ್ಜಿದಾರರು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಮಾಡಿಸಿರಬೇಕು, ಅರ್ಜಿದಾರರು ಅರ್ಜಿಯೊಂದಿಗೆ ಆಧಾರ್ ಕಾರ್ಡ್, ಯೋಜನಾವರದಿ, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ವಯಸ್ಸಿನ ದೃಢೀಕರಣ ಪತ್ರ, ವಾಸದೃಢೀಕರಣ ಪತ್ರ, ಬ್ಯಾಂಕ್ ಪಾಸ್‌ಪುಸ್ತಕ, ವಿಧವೆ/ಅಂಗವಿಕಲರಾಗಿದ್ದಲ್ಲಿ ದೃಢೀಕರಣ ಪತ್ರ ಸಲ್ಲಿಸಬೇಕು.

ಉದ್ಯೋಗಿನಿ ಯೋಜನೆಯಡಿ ಎಸ್‌ಸಿಪಿ/ಟಿಎಸ್‌ಪಿ ಬಳಕೆಯಾಗದ (ಅನ್‌ಸ್ಪೆಂಟ್) ಅನುದಾನದಡಿ ಸೌಲಭ್ಯ ಪಡೆಯಲು ಇಚ್ಚಿಸುವ ಅರ್ಜಿದಾರರು ಸಹಾ ಸೇವಾ ಸಿಂಧು ಪೋರ್ಟಲ್‌ನಲ್ಲೆ ಅರ್ಜಿ ಸಲ್ಲಿಸುವುದು.

ಅರ್ಜಿದಾರರು, ಈ ಎಲ್ಲಾ ಯೋಜನೆಗಳಡಿ ಅರ್ಜಿಯನ್ನು, ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್, ಕೇಂದ್ರಗಳಲ್ಲಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು https://sevasindhu.karnataka.gov.in ಮೂಲಕ ಡಿ. 15ರ ಸಂಜೆ 5.30ರೊಳಗೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಹೆಚ್ಚಿನ ಮಾಹಿತಿಗೆ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ ಹಾಗೂ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಜಿಲ್ಲಾ ಪಂಚಾಯತ್ 2ನೇ ಮಹಡಿ ರಾಮನಗರ, ಹಾಗೂ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಾಲ್ಲೂಕು ಮಟ್ಟದ ಕಚೇರಿಯನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಷ್ಟೇ ಅಭಿವೃದ್ಧಿ ಕೆಲಸ ಮಾಡಿದರೂ ವರುಣಾ ಜನತೆಯ ಋಣ ತೀರಿಸಲಾಗದು

### ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ

ತಾಂಡವಪುರ:- ನಾವು ಎಷ್ಟೇ ಅಭಿವೃದ್ಧಿ ಕೆಲಸಗಳನ್ನು ಮಾಡಿದರೂ ವರುಣ ಕ್ಷೇತ್ರದ ಜನತೆಯ ಋಣ ತೀರಿಸಲು ಸಾಧ್ಯವಿಲ್ಲ ಆದರೂ ವರುಣ ಕ್ಷೇತ್ರದ ಅಭಿವೃದ್ಧಿಗೆ ಮತ್ತು ಜನತೆಯ ಸಮಸ್ಯೆಗಳ ಬಗ್ಗೆ ಹೆಚ್ಚು ಗಮನಹರಿಸಿ ತಮ್ಮ ಋಣ ಕಡಿಮೆ ಮಾಡಿಕೊಳ್ಳಲು ಶ್ರಮಿಸುತ್ತೇನೆ ಎಂದು ವರುಣ ವಿಧಾನಸಭಾ ಕ್ಷೇತ್ರದ ಆಶ್ರಯ ಸಮಿತಿಯ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯರಾದ ಡಾ. ಯತೀಂದ್ರ ಸಿದ್ರಾಮಯ್ಯ ತಿಳಿಸಿದರು.

ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣಾ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಂಡವಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಸುಮಾರು 3 ಕೋಟಿ ರೂ. ಗೂ ಹೆಚ್ಚು ಅನುದಾನದಲ 10 ಗ್ರಾಮಗಳ ಶಾಲಾ ಕೊಠಡಿ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತಾ ಸಿಎಸ್‌ಆರ್ ನಿಧಿ ಮತ್ತು ಸರ್ಕಾರದ ಅನುದಾನದಲ್ಲಿ ತಾಂಡವಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮಲ್ಲುಪುರ ಶಾಲೆ, ಬಿದರಗೂಡು ಶಾಲೆ, ಮರಳೂರು ಶಾಲೆ ನಗರಲ್ಲೇ ಶಾಲೆ ಸುತ್ತೂರು ಶಾಲೆ ಆರೋಪುರ ಶಾಲೆ ಸೇರದಂತೆ ಸುಮಾರು 10 ಗ್ರಾಮಗಳಲ್ಲಿ ಹೆಚ್ಚುವರಿ ಶಾಲಾ ಕಟ್ಟಡ ನಿರ್ಮಾಣ ಮಾಡಲು ಕ್ರಮಕೈಗೊಂಡು ಈಗ ತಾಂಡವಪುರ ಗ್ರಾಮದ ಸರ್ಕಾರಿ ಪ್ರೌಢಶಾಲಾ ಆವನದಲ್ಲಿ ಒಂದೇ ಸ್ಥಳದಲ್ಲಿ ಭೂಮಿ ಪೂಜೆ ನೇರಸಲಾಗಿದ್ದು ನಮ್ಮ ತಂದೆ ವಿರೋಧ ಪಕ್ಷ ನಾಯಕರಾಗಿದ್ದಾಗ ಕ್ಷೇತ್ರಕ್ಕೆ ಹೆಚ್ಚು ಅನುದಾನ ಬಂದಿರಲಿಲ್ಲ ಆದರೂ ಸ್ವಲ್ಪಮಟ್ಟಿಗೆ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚು ಗಮನ ನೀಡಲಾಗಿತ್ತು ಈಗ ನಮ್ಮದೇ ಸರ್ಕಾರ ಸಿದ್ದರಾಮಯ್ಯನವರು ಮುಖ್ಯಮಂತ್ರಿಗಳಾಗಿದ್ದು ಕ್ಷೇತ್ರದ ಶಿಕ್ಷಣಕ್ಕೆ ಮೂಲಭೂತ ಸೌಲಭ್ಯಗಳಿಗೆ ಕ್ಷೇತ್ರದ ಸಮಗ್ರ ಅಭಿವೃದ್ಧಿ ಮಾಡುವ ಮೂಲಕ



ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಮಾಡಲು ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ ಅವರು ವರುಣ ಕ್ಷೇತ್ರದ ಜನತೆ ನಮ್ಮ ತಂದೆ ಸಿದ್ದರಾಮಯ್ಯನವರನ್ನು ಎರಡು ಬಾರಿ ಮುಖ್ಯಮಂತ್ರಿ ಆಗಿ ಮಾಡಿದ್ದೀರಿ ಒಂದು ಬಾರಿ ವಿರೋಧ ಪಕ್ಷದ ನಾಯಕನಾಗಿ ಮಾಡಿದ್ದೀರಿ ನನ್ನನ್ನು ಸಹ ಒಂದು ಬಾರಿ ಶಾಸಕರಾಗಿ ಆಯ್ಕೆ ಮಾಡಿ ತಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಟ್ಟಿದ್ದೀರಿ ಇದೇ ರೀತಿ ನಿಮ್ಮ ಪ್ರೀತಿ ವಿಶ್ವಾಸ ಇಲ್ಲಿ ಮುಂದೆಯೂ ಸಹ ಹೀಗೆ ಇರಲಿ ಎಂದು ತಮ್ಮಲ್ಲಿ ಬೇಡಿಕೊಳ್ಳುತ್ತೇನೆ ಎಂದು ಹೇಳಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷ ಬಿಎಂ ರಾಮರವರು ವರ್ಣ ವಿಧಾನಸಭಾ ಕ್ಷೇತ್ರದಲ್ಲಿ ಅದರಲ್ಲೂ ತಾಂಡವಪುರ ಪಂಚಾಯತಿ ವ್ಯಾಪ್ತಿಯಲ್ಲಿ ಸಾಕಷ್ಟು ಕೈಗಾರಿಕೆಗಳಾಗಿದ್ದು ಭೂಮಿ ಕಳೆದುಕೊಂಡ ರೈತರ ಮಕ್ಕಳಿಗೆ ಉದ್ಯೋಗ ಮತ್ತು ಕೆಲಸವನ್ನು ದೊರಕಿಸಿಕೊಡಬೇಕು ಆ ನಿಟ್ಟಿನಲ್ಲಿ ತಾವು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಿಧಾನ ಪರಿಷತ್ ಸದಸ್ಯರಾದ ಡಾಕ್ಟರ್ ಯತೀಂದ್ರ ಸಿದ್ರಾಮಯ್ಯನವರಲ್ಲಿ ಮನವಿ ಮಾಡಿದರು.

ರಾಜ್ಯ ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ ಬಸವರಾಜ ಮಾತನಾಡಿ ವರುಣ ವಿಧಾನಸಭಾ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳು ಆಗಿದ್ದು ಅದರಲ್ಲೂ ಶೈಕ್ಷಣಿಕ ಕ್ಷೇತ್ರಕ್ಕೆ ಹೆಚ್ಚು ಒತ್ತು ಕೊಡುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಡಾಕ್ಟರ್ ಯತಿಂದ್ರ ಸಿದ್ರಾಮಯ್ಯನವರು ಹೆಚ್ಚು ಶ್ರಮ ವಹಿಸುತ್ತಿದ್ದು ಜೊತೆಗೆ ವರುಣ ಕ್ಷೇತ್ರ ಮಾದರಿ ಕ್ಷೇತ್ರವಾಗಿ ಮಾಡಲು ಎಲ್ಲಾ ರೀತಿಯ ಅಭಿವೃದ್ಧಿ ಕೆಸಗಳಾದ ರಸ್ತೆ ಚರಂಡಿ ಶಾಲಾ ಕೊಡಲಿ ಸಮುದಾಯ ಭವನ ಸೇರಿದಂತೆ ಮೂಲಭೂತ ಸೌಲಭ್ಯಗಳಿಗೆ ಹೆಚ್ಚು ಒತ್ತುಕೊಟ್ಟು ವರುಣ ವಿಧಾನಸಭಾ ಕ್ಷೇತ್ರ ಮಾದರಿ ಕ್ಷೇತ್ರವಾಗಿ ಮಾಡಲು ಹೆಚ್ಚು ಶ್ರಮ ವಹಿಸುತ್ತಿದ್ದಾರೆ ಎಂದು ಬಸವರಾಜ್ ರವರು ಮೆಚ್ಚಿಗೆ ವ್ಯಕ್ತಪಡಿಸಿದರು.

ಸಮಾರಂಭದಲ್ಲಿ ರಾಜ್ಯ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ರಂಗಸ್ವಾಮಿ ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷರಾದ ಎಸ್ ಸಿ ಬಸವರಾಜು ಬಿ ಎಂ ರಾಮು ಜಿಲ್ಲಾ ಪಂಚಾಯತಿ ಮಾಜಿ ಸದಸ್ಯರಾದ ರೇವಮ್ಮ ಮಾಲೆಗೌಡ ದಯಾನಂದಮೂರ್ತಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ನಾಗಮ್ಮ ಶ್ರೀಧರ್ ಬಗರ್ ಹುಕುಂ ಸಮಿತಿಯ ಸದಸ್ಯರಾಜು ಉಪಾಧ್ಯಕ್ಷರಾದ ಬಿ ಶಿವಣ್ಣ ಮಹದೇವಮ್ಮ ಡಾಕ್ಟರ್ ಬಿ ಆರ್ ಅಂಬೇಡ್ಕರ್ ನಿಗಮದ ಮಾಜಿ ನಿರ್ದೇಶಕ ಹುಳಿಮಾವು ನಟರಾಜು ವಿಶ್ವಕರ್ಮ ಅಭಿನಯದ ಮಾಜಿ ಅಧ್ಯಕ್ಷ ನಂದ ಕುಮಾರ ವೀರಶೈವ ಮುಖಂಡ ಪರಶಿವಮೂರ್ತಿತಾಂಡವಪುರ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಟಿ ಕೆ ನಾಗೇಶ ಗ್ರಾಮ ಪಂಚಾಯತ್ ಸದಸ್ಯರಾದ ಮಧುರ ಆನಂದ್ ರೇವಮ್ಮ ಎನ್ ಚಂದ್ರುಶ್ರೀಕಂ ಸ್ವಾಮಿ ಪ್ರಭುಸ್ವಾಮಿ ನಟರಾಜು ಸಿದ್ದಮ್ಮಮಧುಎಂ ದಕ್ಷಿಣ ಮೂರ್ತಿಕಲ್ಮಲ್ಲಿ ಸುರೇಶ್ ಬಾಬು ಪ್ರಜ್ವಲ್ ಮರಳೂರು ಕೃಷ್ಣ ಮಾಲೆಗೌಡ ಬಿ ಪುಟ್ಟಸ್ವಾಮಿ ರಾಜಶೇಖರ್ ಸಿದ್ದರಾಮಯ್ಯನ ಹುಂಡಿ ಡೈರಿ ಅಧ್ಯಕ್ಷ ಸಿದ್ದ ರಾಮುಗೋನಳ್ಳಿ ಕುಮಾರಟಿಎಸ್ ರವಿ, ಬಿದರಗೂಡು ಮಾದೇವಸ್ವಾಮಿ ಆರೋಪುರ ಶಿವಣ್ಣ ಸಿದ್ದಪ್ಪ ಟಿ ಜೆಮಹದೇವ ಅರ್ಕೇಶ್ ಶಿವರಾಜು ಅಣ್ಣಯ್ಯ ಕೆ ಎಸ್ ಹುಂಡಿ ರವಿ ಸಿದ್ದರಾಜು ಗ್ಯಾರಂಟಿ ಯೋಜನೆ ಸಮಿತಿಯ ಸದಸ್ಯ ರವಿಕಿಟ್ಟಿಯಶವಂತ ಮೋಹನ್ ಕುಮಾರ್ ಬಿಳಿಗೆರೆ ರವಿ ಜಯಶೀಲತಾಲೂಕು ದಂಡದಿಕರಾದ ಶಿವಕುಮಾರ್ ತಾಲೂಕು ಪಂಚಾಯಿತಿ ಕಾರ್ಯನಿರ್ವಾಧಿಕಾರಿ ರಾಜೇಶ್ ಶಿಕ್ಷಣಾಧಿಕಾರಿ ಮಹೇಶ್ ನಿರ್ಮಿತಿ ಕೇಂದ್ರದ ಅಧಿಕಾರಿಗಳಾದ ಮಂಜುನಾಥ್ ಸಿದ್ದರಾಜು ತಾಂಡವಪುರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಲೆಕ್ಕ ಸಹಾಯಕ ಪುಟ್ಟರಾಜು ಕಾರ್ಯದರ್ಶಿ ಕೆಕೆ ಮರೆಯ ಸೇರಿದಂತೆ 10 ಗ್ರಾಮಗಳ ಶಾಲೆಯ ಶಿಕ್ಷಕರು ಅಧಿಕಾರಿಗಳು ಗ್ರಾಮ ಪಂಚಾಯತ್ ಸದಸ್ಯರುಗಳುಮುಖಂಡರು ಗ್ರಾಮಸ್ಥರು ಹಾಜರಿದ್ದರು.

## ಕ್ರೀಡಾಕೂಟದಲ್ಲಿ ವಿಜೇತ ಆಟೋಟ ಸ್ಪರ್ಧೆಯಲ್ಲಿ ಬಹುಮಾನ



ಮೈಸೂರು:- ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ ಎಸ್‌ಬಿಆರ್‌ಆರ್ ಮಹಾಜನ ಕಾನೂನು ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಓವೆಲ್ ಮೈದಾನದಲ್ಲಿ ಜರುಗಿದ ಕ್ರೀಡಾಕೂಟ ಸ್ಪರ್ಧೆಯಲ್ಲಿ ಪರಿವರ್ತನಾ ಕಾನೂನು ಕಾಲೇಜಿನ ವಿದ್ಯಾರ್ಥಿಗಳು ವಿವಿಧ ಆಟೋಟ ಸ್ಪರ್ಧೆಯಲ್ಲಿ ಭಾಗವಹಿಸಿ ಹಲವಾರು ಬಹುಮಾನಗಳನ್ನು ತಮ್ಮದಾಗಿಸಿಕೊಂಡಿದ್ದಾರೆ.

ಭರ್ಜ ಎಸೆತದಲ್ಲಿ ಶ್ವೇತಾಶ್ರೀ ತೃತೀಯ ಸ್ಥಾನ, ಎತ್ತರ ಜಿಗಿತದಲ್ಲಿ ಕಿರಣ್ ದ್ವಿತೀಯ ಸ್ಥಾನ, 100ಮೀ.ಓಟದ ಸ್ಪರ್ಧೆಯಲ್ಲಿ ಹೇಮಂತ್ ದ್ವಿತೀಯ ಸ್ಥಾನ, 400ಮೀ ಮತ್ತು 200ಮೀ. ಓಟದ ಸ್ಪರ್ಧೆಯಲ್ಲಿ ಅನಿತಾ ತೃತೀಯ ಸ್ಥಾನ, ತಟ್ಟೆ ಎಸೆತದಲ್ಲಿ ತ್ರಿಶಾ ಹೆಚ್.ಎನ್. ತೃತೀಯ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಬಹುಮಾನ ಪಡೆದ ವಿದ್ಯಾರ್ಥಿಗಳನ್ನು ಪತಿವರ್ತನಾ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ, ಕಾನೂನು ವಿಭಾಗದ ನಿರ್ದೇಶಕರಾದ ಪ್ರೊ.ಕೆ.ವಿ ವಾಸುದೇವ್ ಅವರು ಅಭಿನಂದಿಸಿದ್ದಾರೆ.

ಪ್ರಾಂಶುಪಾಲರಾದ ಪ್ರೊ.ಗೋಕುಲ್, ಪ್ರಾಧ್ಯಾಪಕರಾದ ಪ್ರೊ.ಸೌಮ್ಯ ರಾಜಶೇಖರ್ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರಾದ ವಿನಯ್ ಅವ ರನ್ನು ಚಿತ್ರದಲ್ಲಿ ಕಾಣಬಹುದಾಗಿದೆ.

## ಭತ್ತ ಖರೀದಿಗೆ ವಿದ್ಯುನ್ಮಾನ ತೂಕದ ಯಂತ್ರ ಬಳಕೆಗೆ ಸೂಚನೆ

ಮೈಸೂರು:- ಟಿ. ನರಸೀಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವತಿಯಿಂದ ಟಿ.ನರಸೀಪುರ ವ್ಯಾಪ್ತಿಯಲ್ಲಿ ಪ್ರಸ್ತುತ ಭತ್ತದ ಸುಗ್ಗಿ ಪ್ರಾರಂಭವಾಗಿದ್ದು ರೈತರು ತಾವು ಬೆಳೆದ ಭತ್ತವನ್ನು ಮಾರಾಟ ಮಾಡುವಾಗ ಅಧಿಕೃತ ಚೀಟಿಗಳನ್ನು ವರ್ತಕರಿಂದ ಪಡೆದುಕೊಳ್ಳಲು ತಿಳಿಯಪಡಿಸಿದೆ ಹಾಗೂ ಖರೀದಿದಾರರು ಕೃಷಿ ಹುಟ್ಟುವಳಿಗಳನ್ನು ತೂಕ ಮಾಡುವಾಗ ವಿದ್ಯುನ್ಮಾನ ತೂಕದ ಯಂತ್ರವನ್ನು ಬಳಸುತ್ತಿರುವರೇ ಎಂದು ಪರೀಕ್ಷಿಸಿಕೊಳ್ಳಬೇಕಾಗಿದೆ. ಕೃಷಿ ಮಾರಾಟ ಇಲಾಖೆಯಿಂದ ಅಧಿಕೃತ ಲೈಸನ್ಸ್ ಪಡೆದು ವ್ಯಾಪಾರ ವಹಿವಾಟು ನಡೆಸುತ್ತಿರುವ ವರ್ತಕರುಗಳು ರೈತರಿಂದ ಖರೀದಿಸುವ ಕೃಷಿ ಹುಟ್ಟುವಳಿಗಳಿಗೆ ಅಧಿಕೃತ ಚೀಟಿಗಳನ್ನು ನೀಡಬೇಕಾಗಿ ಹಾಗೂ ತೂಕ ಮಾಡುವಾಗ ವಿದ್ಯುನ್ಮಾನ ತೂಕದ ಯಂತ್ರವನ್ನು ಕಡ್ಡಾಯವಾಗಿ ಬಳಸಬೇಕಾಗಿ ಸೂಚಿಸಲಾಗಿದ್ದು, ಈ ಕುರಿತು ಉಲ್ಲಂಘನೆಗೆ ರೈತರಿಂದ ಯಾವುದಾದರು ಲಿಖಿತ ದೂರು ಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ನಿಯಮಾನುಸಾರ ಕ್ರಮ ವಹಿಸಲಾಗುವುದು ಎಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ತಿಳಿಸಿದ್ದಾರೆ.

## ಶ್ರೀ ಚಿಕ್ಕಮ್ಮ ದೇವಿಗೆ ಚಿನ್ನದ ಒಡವೆ ಧಾರಣೆ



ನಂಜನಗೂಡು:- ಶ್ರೀ ಚಿಕ್ಕಮ್ಮ ಚಿಕ್ಕದೇವಿ ಮೂರ್ತಿಗೆ ಸುಮಾರು 5 ಲಕ್ಷ ರೂಪಾಯಿ ಬೆಲೆಬಾಳುವ ಚಿನ್ನದ ಒಡವೆ ಧಾರಣೆ ಮಾಡಲಾಯಿತು.

ಮೈಸೂರು ಜಿಲ್ಲೆ ನಂಜನಗೂಡು ತಾಲೂಕು ಹುಲ್ಲಹಳ್ಳಿ ಪಟ್ಟಣದಲ್ಲಿರುವ ಶ್ರೀ ಚಿಕ್ಕಮ್ಮ ಚಿಕ್ಕದೇವಿ ದೇವಾಲಯದಲ್ಲಿ ಇಂದು ಶುದ್ಧ ಹುಣ್ಣಿಮೆ ದಿನದಂದು ಸುಮಾರು 30 ಗ್ರಾಮ್ ಗೂ ಹೆಚ್ಚು ಚಿನ್ನದ ನೆಕ್ಲೆಸ್ ಹಾಗೂ ತಾಲಿಗಳನ್ನು ಧಾರಣೆ ಮಾಡಲಾಯಿತು. ದೇವಿಗೆ ಭಕ್ತಾದಿಗಳು ನೀಡಿದ ಸಣ್ಣ ಸಣ್ಣ ಚಿನ್ನದ ಕಾಣಿಕೆಗಳನ್ನು ಸಂಗ್ರಹಿಸಿ ದೇವಾಲಯದ ಆಡಳಿತ ಮಂಡಳಿ ವತಿಯಿಂದ ದಾನಿಗಳ ಮುಖಾಂತರ ಸುಮಾರು 30 ಗ್ರಾಂ ಗೂ ಹೆಚ್ಚು ಚಿನ್ನದ ಪದಕ ಹಾಗೂ ಮಾಂಗಲ್ಯಗಳನ್ನು ಮಾಡಿಸಲಾಗಿದೆ.

ಹುಲ್ಲಹಳ್ಳಿಯ ಶ್ರೀ ಶಾಂತ ಮಲ್ಲಿಕಾರ್ಜುನ ಕ್ಷೇತ್ರ ವಿರಕ್ತ ಮಠಾಧ್ಯಕ್ಷರಾದ ಶ್ರೀ ಇಮ್ಮಡಿ ಚೆನ್ನಮಲ್ಲ ದೇಶಿಕೇಂದ್ರ ಸ್ವಾಮಿಗಳಿಂದ ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಒಡವೆಗಳನ್ನು ಧಾರಣೆ ಮಾಡಲಾಯಿತು.

ಇದೇ ಸಂದರ್ಭ ಶ್ರೀ ಚಿಕ್ಕಮ್ಮ ಚಿಕ್ಕದೇವಿ ಮೂರ್ತಿಯನ್ನು ವಿಶೇಷವಾಗಿ ಅಲಂಕರಿಸಿ ವಿಶೇಷ ಪೂಜೆ ಸಲ್ಲಿಸಿ ಮಹಾ ಮಂಗಳಾರತಿ ನೆರವೇರಿಸಲಾಯಿತು. ನಂತರ ಗ್ರಾಮದ ನಾಯಕ ಸಮಾಜದ ವತಿಯಿಂದ ಪ್ರತಿ ಮನೆಯಿಂದಲೂ ದೇವಿಗೆ ಪೂಜೆ ಸಲ್ಲಿಸಿ ತಾಯಿಗೆ ತಮ್ಮ ಭಕ್ತಿ ನಮನ ಸಲ್ಲಿಸಿದರು.ಪೂಜೆ ಸಲ್ಲಿಸಿ ಬಳಿಕ ಸ್ವಾಮೀಜಿ ಮಾತನಾಡಿ ದೇವತಾ ಕಾರ್ಯಕ್ರಮದ ಬಗ್ಗೆ ವಿವರಿಸಿದರು

ಕೆಪಿಸಿಸಿ ಸದಸ್ಯ ಹುಲ್ಲಹಳ್ಳಿ ಬಸವರಾಜ್, ಯಜಮಾನರಾದ ಶಿವನಂಜನಾಯಕ, ಮುಖಂಡರುಗಳಾದ ಎನ್. ಬಸವರಾಜು, ಮಲ್ಲೇಶ್, ಹುಲಿ ಚಾಮುಂಡ ನಾಯಕ, ಶಿವಲಿಂಗ ನಾಯಕ, ಜವರ ನಾಯಕ, ನಾಗರಾಜ್, ಸೇರಿದಂತೆ ಗ್ರಾಮದ ಹಲವರು ಉಪಸ್ಥಿತರಿದ್ದರು.

# ಶ್ರೀ ವೆಂಕಟೇಶ್ವರ ಸ್ವಾಮಿಯ ಹರಿಭಕ್ತರ ಸಂಗಮ ಸಮಾಗಮ

### ಅದ್ದೂರಿ ಗಿಡ ಜಾತ್ರಾ ಮಹೋತ್ಸವ ಸಹಸ್ರಾರು ಭಕ್ತರು ಭಾಗಿ

ನಾಗಮಂಗಲ:- ಶ್ರೀ ವೆಂಕಟೇಶ್ವರನ ಭಕ್ತಾದಿಗಳು ಗಿಡದ ಜಾತ್ರೆಯಲ್ಲಿ ಭಕ್ತಿ ಸಂಗಮದ ಸನ್ನಿಧಿಯಲ್ಲಿ ಅಪಾರ ಸಂಖ್ಯೆಯಲ್ಲಿ ಸೇರಿ ಸ್ವಾಮಿಯ ದರ್ಶನ ಪಡೆದರು.

ನಾಗಮಂಗಲ ತಾಲೂಕಿನ ದೇವಲಾಪುರ ಹೋಬಳಿ ಸಮೀಪ ಇರುವ ನಾಗನಕೆರೆ ಬಳಿ ಇಂದು ನಡೆದ ಗಿಡದ ಜಾತ್ರೆ ಸಾವಿರಾರು ಭಕ್ತಾದಿಗಳು ಗಿಡದ ಜಾತ್ರೆಯಲ್ಲಿ ಭಾಗವಹಿಸಿ ಗೋವಿಂದನ ಕೂಗು ಜಾತ್ರೆ ಎಲ್ಲೆಡೆ ಮುಗಿಲು ಮುಟ್ಟುವಂತೆ ಭಕ್ತಾದಿಗಳ ಸ್ಮರಣೆ ಕಂಡುಬಂದಿತು. ಬೆಟ್ಟದ ಗುಡಿ ಮೇಲಿರುವ ಶ್ರೀ ವೆಂಕಟೇಶ್ವರ ಸ್ವಾಮಿ ದೇವಾಲಯದ ಬಳಿಶ್ರೀ ಕ್ಷೇತ್ರ ತಿರುಮಲ ತಿರುಪತಿ ನಡೆಯುವ ಪೂಜಾ ವಿಧಿ ವಿಧಾನಗಳಂತೆ ಉತ್ಸವ ಮೂರ್ತಿ ಹಾಗೂ ವೆಂಕಟೇಶ್ವರನ ದೇವರಿಗೆ ವಿಶೇಷ ಪೂಜಾಲಂಕಾರದೊಂದಿಗೆ ಭಕ್ತಾದಿ ಗಳಿಗೆ ಸರತಿ ಸಾಲಿನಲ್ಲಿ ದೇವರ ದರ್ಶನ ಮಾಡಲು ವ್ಯವಸ್ಥೆ



ಮಾಡಲಾಗಿತ್ತು.

ಅಪಾರ ಸಂಖ್ಯೆಯಲ್ಲಿ ಭಕ್ತಾದಿಗಳು ವ್ಯಾಪಾರ ಹಾಗೂ ಕಾಡಿನ ಮಧ್ಯೆ ಭಕ್ತಾದಿಗಳಿಗೆ ಸಹಭೋಜನ ಮಾಡಿಸಿದ್ದು ಅದ್ದೂರಿಯಾಗಿ ಕಾಡಿನ ಮಧ್ಯೆ ವೆಂಕಟೇಶ್ವರನ ಕೂಗು ಮುಗಿಲುಮುಟ್ಟಿವಂತೆ ಭಕ್ತಾದಿಗಳ ಸಂಗಮ ಕೂಡಿತ್ತು. ಈ ಗಿಡದ ಜಾತ್ರೆಯ ವಿಶೇಷತೆಯಲ್ಲಿ ಮಾಂಸ ಮಾರಾಟವು ಇದ್ದು ಭಕ್ತಾದಿ ಭಕ್ತಾದಿಗಳಿಗೆ ಹಾಗೂ ಸಾರ್ವಜನಿಕರು ಕೊಂಡುಕೊಂಡು ಸ್ವಾಮಿಯ ಪ್ರಸಾದವೆಂದು ಸೇವಿಸುವರು.

ಗಿಡದ ಜಾತ್ರೆ ಮೂಲ ಸ್ಥಳದಲ್ಲಿಯೂ ದಾಸಪ್ಪರು ಅಲ್ಲಿಯೂ ಸೇರಿದ್ದು ಭಕ್ತಾದಿಗಳು ಕೆರೆಯಲ್ಲಿ ಗಂಗಾ ಪೂಜೆ ಮಾಡಿ ವೆಂಕಟೇಶ್ವರನ ಸ್ಮರಣೆ ಅದ್ದೂರಿಯಾಗಿ ಜರುಗಿತು.

ಭಕ್ತಾದಿಗಳು ಒಂದೇ ದಿನವಾದರೂ ಸಾವಿ ರಾರು ಸಂಖ್ಯೆಯಲ್ಲಿ ಒಂದೇ ಬಾರಿ ಸೇರಿ ಸ್ವಾಮಿಯ ದರ್ಶನ ಪಡೆಯಲು ನೂಕುನುಗಲು ಹಾಗೂ ವಾಹನ ಸವಾರರಿಗೂ ತುಂಬಾ ಕಷ್ಟಕರವಾಗಿತ್ತು. ಎರಡನೇ ತಿರುಪತಿ ಎಂದು ಪ್ರಸಿದ್ಧಿಯಾಗಿರುವ ಈ ಕ್ಷೇತ್ರ ಗಿಡದ ಜಾತ್ರೆಯ ಭಾಗವಹಿಸಿ ಸ್ವಾಮಿಯ ದರ್ಶನ ಪಡೆದು ದಾಸಪ್ಪರಿಗೆ ಹರಕೆ ಒಪ್ಪಿಸಿ ಸ್ವಾಮಿಯ ದರ್ಶನ ಪಡೆದು ಭಾಗವಹಿಸಿದ್ದು ಭಕ್ತರಿಗೆ ಸಂತಸ ಆಗುತ್ತಿತ್ತು.

## ಸಂಕ್ಷಿಪ್ತ ಸುದ್ದಿ

### ಡಿ.18ರಂದು ರಾಷ್ಟ್ರೀಯ ಅಲ್ಪಸಂಖ್ಯಾತರ ಹಕ್ಕುಗಳ ದಿನ ಆಚರಣೆ



ಬೆಂಗಳೂರು:– ಡಿ.18ರಂದು ರಾಷ್ಟ್ರೀಯ ಅಲ್ಪಸಂಖ್ಯಾತರ ಹಕ್ಕುಗಳ ದಿನವನ್ನಾಗಿ ಆಚರಿಸಲು 2025ನೇ ಡಿಸೆಂಬರ್ 04 ರಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಸಭಾಂಗಣದಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹಮದ್ ಉಪಸ್ಥಿತರಿದ್ದ ಆಯೋಗದ ಸದಸ್ಯರು ಮತ್ತು ಪ್ರಧಾನ ಮಂತ್ರಿ ಹೊಸ 15 ಅಂಶಗಳ ಕಾರ್ಯಕ್ರಮದ ರಾಜ್ಯಮಟ್ಟದ ಸದಸ್ಯರುಗಳ ಜಂಟಿ ಸಭೆಯಲ್ಲಿ ನಿರ್ಧರಿಸಲಾಯಿತು.

ಈ ಸಭೆಯಲ್ಲಿ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತೆ ಶ್ರೀಮತಿ ಬಾನು ಮುಸ್ತಾಕ್ ರವರು ಸಹ ಉಪಸ್ಥಿತರಿದ್ದು, ಆಯೋಗವು ಮಾಡುತ್ತಿರುವ ಅನೇಕ ರಚನಾತ್ಮಕ ಚಟುವಟಿಕೆಗಳಿಗೆ ಶ್ಲಾಘಿಸುತ್ತಾ ತಾಲ್ಲೂಕು ಮಟ್ಟದಲ್ಲಿಯೂ ಸಹ ಅಲ್ಪಸಂಖ್ಯಾತರ ಸಲಹಾ ಸಮಿತಿಯನ್ನು ರಚಿಸಲು, ಮುಸ್ಲಿಂ ಮಹಿಳೆಯರು, ಸಾಮಾಜಿಕ ಮಾಧ್ಯಮದಲ್ಲಿ ಹೆಚ್ಚಾಗಿ ತೊಡಗಿಸಿ ಅಲ್ಪಸಂಖ್ಯಾತರಿಗಾಗಿ ಇರುವ ಯೋಜನೆಗಳಿಗೆ ಸಂಬಂಧಿಸಿದ ಮಾಹಿತಿ ಮಹಿಳೆಯರಿಗೆ ತಲುಪುವಂತಾಗಬೇಕು, ಅಲ್ಪಸಂಖ್ಯಾತರ ಯುವಕರುಗಳನ್ನು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿ, ಅಸಂಘಟಿತ ವಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಯುವಕರುಗಳನ್ನು ಸಂಘಟಿತ ವಲಯಗಳಲ್ಲಿ ತೊಡಗಿಸಲು ಅಭಿಪ್ರಾಯಪಟ್ಟರು. ಕರ್ನಾಟಕ ರಾಜ್ಯದಲ್ಲಿ 600 ಕ್ಕೂ ಹೆಚ್ಚು ಕನ್ನಡ ಮುಸ್ಲಿಂ ಲೇಖಕರು ಇರುವ ಬಗ್ಗೆ ತಿಳಿಸುತ್ತಾ ಹೆಮ್ಮೆಯಿಂದ ಉಲ್ಲೇಖಿಸಿದರು ಎಂದು ಕರ್ನಾಟಕ ರಜ್ಯ ಅಲ್ಪಸಂಕ್ಯಾತರ ಆಯೋಗದ ಅಧ್ಯಕ್ಷರ ವಿಶೇಷ ಕರ್ತವ್ಯಾದಿಕಾರಿ ಮುಜಿಬುಲ್ಲಾ ಜಫಾರಿ ಅವರು ತಿಳಿಸಿದರು.

### ಕಾಸರಗೋಡು ಗಡಿ ಕನ್ನಡಿಗರ ಸಮಸ್ಯೆಗಳ ಬಗ್ಗೆ ವಿಶೇಷ ಸಭೆ

ಬೆಂಗಳೂರು:– ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಗಡಿ ಪ್ರಾಧಿಕಾರದ ಜಂಟಿ ಆಯೋಜನೆಯಲ್ಲಿ ಕೇರಳದ ಕಾಸರಗೋಡು ಗಡಿ ಕನ್ನಡಿಗರ ಸಮಸ್ಯೆಗಳ ಬಗ್ಗೆ ವಿಶೇಷ ಸಭೆ ಆಯೋಜಿಸಲಾಗಿತ್ತು.

ಹಲವಾರು ಸಮಸ್ಯೆಗಳ ಬಗ್ಗೆ ಕೇಂದ್ರ ಸರ್ಕಾರದ ಮೈನಾಟಿಟಿ ಸಚಿವರಿಗೆ, ಶಿಕ್ಷಣ ಸಚಿವರಿಗೆ ಹಾಗೂ ಆಔಕಖಿ ಸಚಿವರಿಗೆ ಮನವಿ ಸಲ್ಲಿಸಲು ನಿರ್ಣಯಿಸಲಾಯಿತು. ಗಡಿ ಪ್ರಾಧಿಕಾರ ಹಾಗೂ ಕನ್ನಡ ಪ್ರಾಧಿಕಾರದ ಅಧ್ಯಕ್ಷರಾದ ಸೋಮಣ್ಣ ಬೇವಿನಮರದ, ಪುರುತ್ತಮ ಬಿಳಿಮಲೆ, ಕಾರ್ಯದರ್ಶಿಗಳಾದ ಸಂತೋಷ ಹಾನಗಲ್ಲ, ಪ್ರಕಾಶ ಮತ್ತಿಹಳ್ಳಿ, ಕಾಸರಗೋಡಿನ ನಿಯೋಗದಲ್ಲಿ ಸುಬ್ಬಯ್ಯ ಕಟ್ಟೆ, ಸುಬ್ರಹ್ಮಣ್ಯ ಬಾಡೂರು, ಕಸಾಪ ಅಧ್ಯಕ್ಷ ಜಯಪ್ರಕಾಶ ತೊಟ್ಟೆ ತೋಡಿ, ಡಾ ಪ್ರಮೀಳಾ ಮಾಧವ, ಶಂಕರನಾರಾಯಣ ಭಟ್, ವಿಬಿ ಕುಲಮರ್ವ, ಅಡ್ವಕೇಟ್ ಕೂಡ್ಲು ಗಂಗಾಧರ ತೆಕ್ಕೆಮೂಲೆ ಭಾಗವಹಿಸಿದ್ದರು.

ನಂತರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಮತ್ತು ಮುಖ್ಯ ಕಾರ್ಯದರ್ಶಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಯಿತು.

### ವ್ಯಾಕರಣ ಕಲಿತರೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು



ಮೈಸೂರು: ಕನ್ನಡ ವ್ಯಾಕರಣವನ್ನು ಸರಿಯಾಗಿ ಅರ್ಥ ಮಾಡಿಕೊಂಡರೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳಿಗೆ ಯಶಸ್ಸು ಸಿಗಲಿದೆ ಎಂದು ಮಹಾರಾಜ ಕಾಲೇಜಿನ ಆಡಳಿತಾಧಿಕಾರಿ ಡಾ.ಟಿ.ತಿಮ್ಮಯ್ಯ ಅಭಿಪ್ರಾಯಪಟ್ಟರು.

ಶ್ರೀ ರಾಜೇಂದ್ರ ಪ್ರಿಂರಸ್ ಆಂಡ್ ಪಬ್ಲಿರಸ್ ವತಿಯಿಂದ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಡಾ.ಆರ್.ಉಷಾರಾಣಿ ಅವರ ಕನ್ನಡ ಸ್ಪರ್ಧಾ ಕೈಪಿಡಿ ಕೃತಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಇತಿಹಾಸ, ಸಮಾಜಶಾಸ್ತ್ರ, ರಾಜ್ಯಶಾಸ್ತ್ರ ಸೇರಿದಂತೆ ಎಲ್ಲ ವಿಷಯಗಳೂ ಭಾಷೆಯಿಂದಲೇ ನಿರೂಪಿತವಾಗಿವೆ. ನಿಘಂಟು ಇಲ್ಲದೆ ಪದಗಳನ್ನು ಅರ್ಥ ಮಾಡಿಕೊಳ್ಳಲು ವ್ಯಾಕರಣದಿಂದ ಸಾಧ್ಯ. ಆದ್ದರಿಂದ ಕನ್ನಡ ವ್ಯಾಕರಣವನ್ನು ಸರಿಯಾದ ರೀತಿಯಲ್ಲಿ ಅಭ್ಯಾಸ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ಮಾಡಿಕೊಳ್ಳುವ ವಿದ್ಯಾರ್ಥಿಗಳಿಗೆ ಕನ್ನಡ ಭಾಷೆಗೆ ಸಂಬಂಧಪಟ್ಟ ಪರಾಮರ್ಶನಾ ಕೃತಿಗಳ ಕೊರತೆ ಇದೆ. ಇದನ್ನು ನೀಗಿಸುವ ನಿಟ್ಟಿನಲ್ಲಿ ಸಾಹಿತ್ಯ, ಭಾಷೆ, ಕಾವ್ಯ ಮೀಮಾಂಸೆ, ಛಂದಸ್ಸು, ಕವಿ, ಕೃತಿ, ವ್ಯಾಕರಣ ಎಲ್ಲವನ್ನೂ ಒಳಗೊಂಡ ಕೈಪಿಡಿಯನ್ನು ಹೊರ ತಂದಿರುವ ಡಾ.ಉಷಾರಾಣಿ ಅವರು ಅಭಿನಂದನೆಗೆ ಅರ್ಹರು. ಪ್ರಶ್ನೆ ಮತ್ತು ಬಹುಮಾದರಿ ಉತ್ತರಗಳನ್ನು ನೀಡಿ, ಪ್ರತಿ 50 ಪ್ರಶ್ನೆಗಳ ನಂತರ ಉತ್ತರವನ್ನು ನೀಡಿರುವುದು ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಮೆಚ್ಚಿಗೆ ವ್ಯಕ್ತಪಡಿಸಿದರು.

ಹಿರಿಯ ಪತ್ರಕರ್ತ ಸಿ.ಕೆ.ಮಹೇಂದ್ರ ಮಾತನಾಡಿ, ಅತ್ಯಂತ ಸರಳವಾಗಿ ಕನ್ನಡದಲ್ಲಿ ಹೇಳಬಾಹುದಾದ ವಿಷಯಗಳನ್ನೂ ಪಠ್ಯಕ್ರಮದಲ್ಲಿ ಕ್ಲಿಷ್ಟಕರ ಸಂಸ್ಕೃತ ಪದಗಳಲ್ಲಿ ಉಲ್ಲೇಖಿಸಲಾಗುತ್ತಿದೆ. ಹೀಗಾಗಿ ವಿಷಯ ಗ್ರಹಿಸುವುದೇ ಕಷ್ಟ ಎಂದು ಅಭಿಪ್ರಾಯಪಟ್ಟರು.

ಲೇಖಕಿಯೂ ಆದ ಭಾರತೀಯ ಭಾಷಾ ಸಂಸ್ಥಾನದ ಸಂಪನ್ಮೂಲ ವ್ಯಕ್ತಿ ಡಾ.ಆರ್.ಉಷಾರಾಣಿ, ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಪ್ರಕಾಶಕ ಡಿ.ಎನ್.ಲೋಕಪ್ಪ ಇದ್ದರು.

# ಪರಿಶಿಷ್ಟರ ಮೇಲಿನ ದೌರ್ಜನ್ಯಕ್ಕೆ ತಕ್ಷಣ ಎಫ್‌ಐಆರ್

## ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗದ ಸದಸ್ಯ ವಡ್ಡಪಲ್ಲಿ ರಾಮಚಂದರ್ ಸೂಚನೆ



ಮೈಸೂರು: ಪರಿಶಿಷ್ಟ ಜಾತಿಯ ಜನರ ಮೇಲೆ ದೌರ್ಜನ್ಯ ನಡೆದರೆ ಎಫ್‌ಐಆರ್ ದಾಖಲಿಸಿ ತನಿಖೆ ನಡೆಸಿ ಸೂಕ್ತ ಕಾನೂನು ಕ್ರಮ ಕೈಗೊಂಡು ಪರಿಶಿಷ್ಟ ಜಾತಿಯ ಜನರಿಗೆ ಭದ್ರತೆಯನ್ನು ಒದಗಿಸಬೇಕು ಎಂದು ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗದ ಸದಸ್ಯರಾದ ವಡೆಪಲ್ಲಿ ರಾಮಚಂದರ್ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಇಂದು ಜಿಲ್ಲಾ ಪಂಚಾಯತ್ ನ ಡಿ ದೇವರಾಜ ಅರಸು ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಾನ್ಯ ಪ್ರಧಾನ ಮಂತ್ರಿಗಳು ಪರಿಶಿಷ್ಟ ಜಾತಿ ಹಾಗೂ ಪಂಗಡದ ಜನರ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಪರಿಶಿಷ್ಟ ಜಾತಿಯ ಜನರಿಗೆ ಇರುವ ಸರ್ಕಾರದ ಸೌಲಭ್ಯಗಳನ್ನು ಅರ್ಹರಿಗೆ ಪಾರದರ್ಶಕವಾಗಿ ತಲುಪಿಸಬೇಕು ಎಂದು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಿಶಿಷ್ಟ ಜಾತಿಯ ಜನರಿಗೆ ಮುದ್ರಾ ಯೋಜನೆ, ಎಂ ಎಸ್ ಎಂ ಇ ಯೋಜನೆ, ಶೈಕ್ಷಣಿಕ ಶಾಲಾ ಯೋಜನೆ, ಸ್ಟಾರ್ಟ್ ಆಫ್ ಯೋಜನೆ ಮುಂತಾದ ಯೋಜನೆಗಳಲ್ಲಿ ವಿವಿಧ ಬ್ಯಾಂಕ್ ಗಳಲ್ಲಿ ಸಾಲ ಸೌಲಭ್ಯವನ್ನು ನೀಡಿ ಅವರ ಏಳಿಗೆಗೆ ಕ್ರಮ ಕೈಗೊಳ್ಳಬೇಕು. ಸಾಲ ನೀಡಲು ಅವರನ್ನು ಬ್ಯಾಂಕುಗಳು ಅಲೆದಾಡಿಸಬಾರದು ಈ ಬಗ್ಗೆ ಕ್ರಮ ವಹಿಸಬೇಕು. ಬ್ಯಾಂಕುಗಳು ಸಾಲ ನೀಡುವಲ್ಲಿ ಸರಿಯಾಗಿ ಸ್ಪಂದಿಸುವುದಿಲ್ಲ ಎಂದು ದೂರುಗಳು ಬರುತ್ತಿವೆ. ಮುಂದೆ ಇಂತಹ ದೂರುಗಳಿಗೆ ಆಸ್ಪದ ನೀಡದಂತೆ ಕಾರ್ಯ ನಿರ್ವಹಿಸಬೇಕು ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ಅವರಿಗೆ ಸೂಚನೆ ನೀಡಿದರು.

ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗದ ನಿರ್ದೇಶಕರಾದ ಸುನಿಲ್ ಕುಮಾರ್ ಬಾಬು ಅವರು ಮಾತನಾಡಿ ಮಾನ್ಯ ಸದಸ್ಯರು ಪರಿಶಿಷ್ಟ ಜಾತಿಗಳ ಜನರ ಹಕ್ಕುಗಳನ್ನು ರಕ್ಷಿಸುವ ಹಾಗೂ ಸೌಲಭ್ಯಗಳನ್ನು ಕಲ್ಪಿಸುವಂತೆ ನೋಡಿಕೊಳ್ಳುವ ಅಧಿಕಾರ ಹೊಂದಿರುತ್ತಾರೆ. ಸಮಿತಿಯ ಸದಸ್ಯರು ನ್ಯಾಯಿಕ ಅಧಿಕಾರವನ್ನು ಹೊಂದಿರುತ್ತಾರೆ. ಜಿಲ್ಲೆಯಲ್ಲಿ ದೌರ್ಜನ್ಯಕ್ಕೆ ಒಳಗಾದ ಪರಿಶಿಷ್ಟ ಜಾತಿಯ ವ್ಯಕ್ತಿಯ ಕುಟುಂಬದ ಅವಲಂಬಿತರಿಗೆ ಯಾವ ಯಾವ ಸೌಲಭ್ಯವನ್ನು ನೀಡಿದ್ದೀರಿ ಎಂದು ಮಾಹಿತಿ ಪಡೆದುಕೊಂಡರು.

ಮೈಸೂರು ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಯಲ್ಲಿ ಕಳೆದ ವರ್ಷ 69 ರಷ್ಟು ಫಲಿತಾಂಶ ಬಂದಿದೆ. ಇದು ಕಡಿಮೆ ಆಗಿದೆ. ಎಸ್‌ಎಸ್‌ಎಲ್ಸಿ ಯಲ್ಲಿ ಎಸ್ಸಿ ಹಾಗೂ ಎಸ್ಟಿ ವಿಧ್ಯಾರ್ಥಿಗಳ ಉತ್ತೀರ್ಣ ಮಟ್ಟವನ್ನು ಹೆಚ್ಚಳ ಮಾಡಲು ಯಾವ ಯಾವ ಕ್ರಮಗಳನ್ನು ಹಮ್ಮಿಕೊಂಡಿದ್ದೀರಿ ಎಂದು ಡಿಡಿಪಿಐ ಅವರಿಂದ ಮಾಹಿತಿಯನ್ನು ಪಡೆದುಕೊಂಡರು. ಫಲಿತಾಂಶವನ್ನು ಉತ್ತಮಗೊಳಿಸಲು ವಿಶೇಷ ತರಗತಿಗಳನ್ನು ನಡೆಸಿ. ವಿಧ್ಯಾರ್ಥಿಗಳಿಗೆ ವ್ಯಕ್ತಿಗತ ಗಮನ ಹರಿಸಿ ವಿಧ್ಯಾರ್ಥಿಗಳಿಗೆ ಕಠಿಣವಾದ ವಿಷಯಗಳನ್ನು ಸುಲಭವಾಗಿ ವಿವಿಧ ಕ್ರಮಗಳ ಮೂಲಕ ಅರ್ಥ ಮಾಡಿಸಬೇಕು ಎಂದು ಡಿಡಿಪಿಐ ಅವರಿಗೆ ಸೂಚನೆ ನೀಡಿದರು.

ಕೆಲವು ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಂದ ಟ್ಯೂಷನ್ ಫೀಸ್ ಕಲೆಕ್ಟ್ ಮಾಡುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ ಈ ಬಗ್ಗೆ ಕ್ರಮವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳಾದ ಜಿ ಲಕ್ಷ್ಮೀಕಾಂತ ರೆಡ್ಡಿ ಅವರು ಮಾತನಾಡಿ ಜಿಲ್ಲೆಯಲ್ಲಿ ಎಸ್ ಸಿ ಹಾಗೂ ಎಸ್ ಟಿ ನಿವೇಶನ ರಹಿತರ ಸರ್ವೇ ಮಾಡಲಾಗಿದ್ದು, ಇವರಿಗೆ ಹಂತ ಹಂತವಾಗಿ ನಿವೇಶನ ನೀಡಲು ಕ್ರಮ ವಹಿಸಲಾಗುತ್ತಿದೆ. ನಗರ ಪ್ರದೇಶದಲ್ಲಿ ಪರಿಶಿಷ್ಟ ಜಾತಿಯ ನಿವೇಶನ ರಹಿತರು ಹೆಚ್ಚು ಇದ್ದಾರೆ.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ರಂಗೇಗೌಡ ಅವರು ಮಾತನಾಡಿ ಜಿಲ್ಲೆಯಲ್ಲಿ 2011 ರ ಜನಗಣತಿಯ ಪ್ರಕಾರ 30,01,127 ಜನಸಂಖ್ಯೆ ಇದ್ದು ಇದರಲ್ಲಿ 5,36,643 ಪರಿಶಿಷ್ಟ ಜಾತಿಯ ಜನಸಂಖ್ಯೆ ಇರುತ್ತದೆ. ಜಿಲ್ಲೆಯಲ್ಲಿ ದೌರ್ಜನ್ಯಕ್ಕೆ ಒಳಗಾದ ಹಾಗೂ ಕೊಲೆಯಾದ ಪರಿಶಿಷ್ಟ ಜಾತಿಯ ವ್ಯಕ್ತಿಯ ಕುಟುಂಬದ ಅವಲಂಬಿತರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಹಾಗೂ ಕೆಲವರಿಗೆ ಸರ್ಕಾರಿ ಉದ್ಯೋಗ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಪ್ರತಿ ಮೂರು ತಿಂಗಳಿಗೆ ಒಮ್ಮೆ ಪರಿಶಿಷ್ಟ ಜಾತಿಗಳ ಮಾನಿಟರಿಂಗ್ ಕಮಿಟಿ ಸಮಿತಿ ಸಭೆಯನ್ನು ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಸಲಾಗುತ್ತದೆ. ಜಿಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪ್ರೀ ಮೆಟ್ರಿಕ್ 45 ಹಾಗೂ ಪೋಸ್ಟ್ ಮೆಟ್ರಿಕ್ 36 ಹಾಸ್ಟೆಲ್ ಗಳು ಇವೆ.

ಸಭೆಯಲ್ಲಿ ಎನ್ ಸಿ ಎಸ್ ಸಿ ಸೂರಜ್ ಕುಮಾರ್ ಯಾದವ್, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗಳಾದ ವಿಷ್ಣುವರ್ಧನ್, ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶೇಕ್ ತನ್ವೀರ್ ಆಸಿಫ್, ಅಪರ ಜಿಲ್ಲಾಧಿಕಾರಿ ಗಳಾದ ಡಾ ಪಿ.ಶಿವರಾಜು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಚಾರಿ ಪೊಲೀಸರಿಗೆ ಹೈಜೀನ್ ಆನ್ ಗೋ ಮೊಬೈಲ್ ಟಾಯ್ಲೆಟ್ ವಾಹನಗಳು ಲಭ್ಯ: ಡಾ.ಜಿ.ಪರಮೇಶ್ವರ್



ಬೆಂಗಳೂರು:– ಬೆಂಗಳೂರು ಸಂಚಾರಿ ಪೊಲೀಸರಿಗೆ ಮೂರು ಹೈಜೀನ್ ಆನ್ ಗೋ ಹೆಸರಿನ ಮೊಬೈಲ್ ಟಾಯ್ಲೆಟ್ ವಾಹನಗಳು ಇನ್ನು ಮುಂದೆ ಲಭ್ಯವಾಗಲಿವೆ ಎಂದು ಗೃಹ ಸಚಿವ ಡಾಜಿ.ಪರಮೇಶ್ವರ್ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ವತಿಯಿಂದ ಪೊಲೀಸ್ ಪ್ರಧಾನ ಕಚೇರಿಯಲ್ಲಿ ಬೆಂಗಳೂರು ನಗರ ಪೊಲೀಸ್ ಘಟಕಕ್ಕೆ ಹೈಜಿನ್ ಆನ್ ಗೋ ವಾಹನಗಳಿಗೆ ಚಾಲನೆ ನೀಡಲು ಹಮ್ಮಿ ಕೊಂಡಿದ್ದ ಕಾರ್ಯಕ್ರಮದಲ್ಲಿ ವಾಹನಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಗೃಹ ಸಚಿವರು. ಟ್ರಾಫಿಕ್ ಪೊಲೀಸರು ಹಗಲು–ಇರುಳು, ಚಳಿ–ಮಳೆ ಎನ್ನದೆ ಕರ್ತವ್ಯ ನಿರ್ವಹಿಸುತ್ತಾರೆ. ಟ್ರಾಫಿಕ್ ಸಿಗ್ನಲ್‌ಗಳನ್ನು ನಿರ್ವಹಣೆ ಮಾಡುವಾಗ ಅವರಿಗ ಶೌಚಾಲಯಕ್ಕೆ ಹೋಗಿ ಬರುವುಕ್ಕೂ ಸಮಯ ಸಿಗುವುದಿಲ್ಲ. ಮಹಿಳಾ ಸಿಬ್ಬಂದಿಯವರು ಜನಬಿಡ ರಸ್ತೆಗಳಲ್ಲಿ ಕಾಯನಿರ್ವಹಿಸುವಾಗ ನ್ನೂ ಹೆಚ್ಚು ಕಷ್ಟ ಅನುಭವಿಸುತ್ತಾರೆ. ಇದನ್ನು ಮನಗಂಡ ಸರ್ಕಾರ ಈ ಸಮಸ್ಯೆ ಬಗೆಹರಿಸಲು ?ಹೈಜಿನ್ ಆನ್ ಗೋ? ವಾಹನ ಲಭ್ಯವಾಗುವಂತೆ ಮಾಡಿದೆ ಎಂದರು.

ಹೈಜಿನ್ ಆನ್ ಗೋ ಮೂರು ವಾಹನಗಳಿಗೆ 80 ಲಕ್ಷ ರೂ.ಗಳ ವೆಚ್ಚವಾಗಿದ್ದು, ಈ ವಾಹನಗಳು ಬೆಂಗಳೂರಿನ ಮೂರು ಅತ್ಯಧಿಕ ಸಂಚಾರ ದಟ್ಟಣೆಯ ಮಾರ್ಗಗಳಾದ ಧಣಿಸಂದ್ರ, ಆಡುಗೋಡಿ ಮತ್ತು ಮೈಸೂರು ರಸ್ತೆಗಳ 91 ಪೂರ್ವನಿಗಧಿತ ಜಾಗಗಳಲ್ಲಿ ಕಾಲಕಾಲಕ್ಕೆ ಬಂದು ನಿಲ್ಲುತ್ತವೆ. ಬೆಳಿಗ್ಗೆ 8.30 ರಿಂದ ಸಂಜೆ 7 ಗಂಟೆಯವರೆಗೆ ಕಾರ್ಯನಿರ್ವಹಿಸುತ್ತವೆ ಟ್ರಾಫಿಕ್ ಪೊಲೀಸರು ಇವುಗಳನ್ನು ಬಳಸಿಕೊಳ್ಳಬಹುದು. ಒಟ್ಟಾರೆ 2.06 ಕೋಟಿ ರೂ. ವೆಚ್ಚದಲ್ಲಿ ಈ ಯೋಜನೆ ರೂಪಿಸಲಾಗಿದೆ ಎಂದರು.

ಈ ವಾಹನಗಲ್ಲಿ ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕ ಶೌಚಾಲಯವಿದ್ದು, ಹ್ಯಾಂಡ್ ವಾಶ್ ಮತ್ತು ನೈರ್ಮಲ್ಯ ಸಾಧನಗಳು, ಮಹಿಳೆಯರಿಗೆ ಸ್ಯಾನಿಟರಿ ನ್ಯಾಪ್‌ಕಿನ್ ವ್ಯವಸ್ಥೆ, ಕನ್ನಡಿ ಮತ್ತು ಮೂಲಭೂತ ಸೌಕಯಗಳು, ಪ್ರಥಮ ಚಿಕಿತ್ಸೆ, ಅಗ್ನಿಶಾಮಕ ಸಲಕರಣೆ, ಜಿಪಿಎಸ್ ಟ್ರ್ಯಾಕಿಂಗ್, ಹೊರಾವರಣದಲ್ಲಿ ಸಿಸಿಟಿವಿ ಕ್ಯಾಮೆರಾ, ರಸ್ತೆ ಸುರಕ್ಷತೆಗಾಗಿ ಎಲ್ ಇಡಿ ಡಿಸ್‌ಪ್ಲೇ ಅಳವಡಿಸಲಾಗಿದೆ.

ಟ್ರಾಫಿಕ್ ಪೊಲೀಸರು ನಿಸರ್ಗದ ಕರೆ ಬಂದಾಗ ದೇಹಬಾಧೆ ತೀರಿಸಿಕೊಳ್ಳಲು ಸಾಧ್ಯವಾಗದೆ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದರು. ಇವರ ಸಮಸ್ಯೆ ಪರಿಹಾರಕ್ಕೆ ರೆನಾಲ್ಟ್ ಕಂಪನಿಯವರು ಹೈಜಿನ್ ಆನ್ ಗೋ ವಾಹನ ಸಿದ್ಧಪಡಿಸಿರುವುದಕ್ಕಾಗಿ ಸರ್ಕಾರದ ಪರವಾಗಿ ಹಾಗೂ ವೈಯಕ್ತಿಕವಾಗಿ ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಪೊಲೀಸ್ ಮಹಾನಿರ್ದೇಶಕರಾದ ಡಾ.ಎಂ.ಎ.ಸಲೀಂ, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ ಕುಮಾರ್ ಸಿಂಗ್ ಹಾಗೂ ರೆನಾಲ್ಟ್ ನಿಸಾನ್ ಕಂಪನಿಯ ಅಧಿಕಾರಿಗಳು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಇಂದು ಬಾಬಾ ಸಾಹೇಬರ ಪರಿನಿಬ್ಬಾಣ ದಿನ

ಮೈಸೂರು: ಮೈಸೂರಿನ ಸಿದ್ಧಾರ್ಥ ನಗರದ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಸಂಘಗಳ ಒಕ್ಕೂಟದ ಆಶ್ರಯದಲ್ಲಿ ವಿವಿಧ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಡಿ.6 ರಂದು ಸಂಜೆ 6ಗಂಟೆಗೆ ಸಿದ್ಧಾರ್ಥ ನಗರದ ಲಲಿತಮಹಲ್ ಮೈದಾನದಲ್ಲಿ ಬಾಬಾ ಸಾಹೇಬರ ಪರಿನಿಬ್ಬಾಣ ದಿನದ ಅಂಗವಾಗಿ ಮೇಣದ ಬತ್ತಿ ಬೆಳಗಿಸಿ ನಮನ ಸಲ್ಲಿಸಲಾಗುವುದು ಎಂದು ಮೈಸೂರು ನಗರ ಪಾಲಿಕೆ ಮಾಜಿ ಸದಸ್ಯರಾದ ಪಲ್ಲವಿ ಬೇಗಂ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಬಾಬಾ ಸಾಹೇಬರ ಜೀವನದ ಕಲೆ ಕೊನೆಯ ಸನ್ನಿವೇಶಗಳನ್ನು ಬೃಹತ್ ಎಲ್‌ಇಡಿ ಪರದೆ ಮೇಲೆ ಪ್ರದರ್ಶಿಸಲಾಗುವುದು. ಇದಕ್ಕೆ ಭಾರತೀಯ ಬೌದ್ಧ ಮಹಾ ಸಭಾ, ಜೈಭೀಮ್ ಬಂಧು ಬಳಗ ಮೊದಲಾದವು ಸಹಕಾರ ನೀಡುತ್ತಿವೆ ಎಂದರು.

ಬಾಬಾ ಸಾಹೇಬರು ಹಿಂದುಳಿದವರು, ದಲಿತರು, ನೊಂದವರು ಸಹಾ ಸಮ ಸಮಾಜದಲ್ಲಿ ಬದುಕಲೆಂದು ಅದಕ್ಕೆ ಅಗತ್ಯವಾದ ಸಂವಿಧಾನ ನೀಡಿದ್ದಾರೆ. ಹೀಗಾಗಿ ಅವರ ಸ್ಮರಣೆಗಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಇದೇ ವೇಳೆ ಅಮ್ಮ ರಾಮಚಂದ್ರ ತಂಡದಿಂದ ಭೀಮಗೀತ ಗಾಯನ ನಡೆಯಲಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ವಿವಿಧ ಸಂಘ ಸಂಸ್ಥೆ ಮುಖಂಡರಾದ ಪ್ರದೀಪ್‌ಕುಮಾರ್, ಮುನಿಸ್ವಾಮಿ, ಸಿ.ಮೋಹನ್, ಶಾಂತರಾಜು ಉಪಸ್ಥಿತರಿದ್ದರು.



# ಸುದ್ದಿ ಮನೆಗೆ ಘನತೆ ತಂದ ಟಿಜೆಎಸ್ ಜಾರ್ಜ್, ಅ.ಚ.ಶಿವಣ್ಣ

## ಕೆಯುಡಬ್ಲ್ಯೂಜೆ ಶ್ರದ್ಧಾಂಜಲಿ ಸಭೆಯಲ್ಲಿ ರವಿ ಹೆಗಡೆ ಗುಣಗಾನ




ಬೆಂಗಳೂರು:– ಹಿರಿಯ ಪತ್ರಕರ್ತರಾದ ಟಿ.ಜೆ.ಎಸ್. ಜಾರ್ಜ್ ಅವರು ಸುದ್ದಿ ಮನೆಗೆ ಘನತೆ ತಂದರೆ, ಸಂಜೆವಾಣಿ ಅ.ಚ.ಶಿವಣ್ಣ ಅವರು ಸ್ಕೂಪ್ ಮತ್ತು ಬ್ರೇಕಿಂಗ್ ನ್ಯೂಸ್‌ಗಳಿಗೆ ಹೊಸ ಮೆರಗು ಕೊಟ್ಟರು ಎಂದು ಕೆಯುಡಬ್ಲೂಜೆ ಶ್ಲಾಗಿಸಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯೂಡಬ್ಲ್ಯೂಜೆ) ವತಿಯಿಂದ ಅಗಲಿದ ಹಿರಿಯ ಪತ್ರಕರ್ತರಾದ ಟಿಜೆಎಸ್ ಜಾರ್ಜ್, ಅ.ಚ.ಶಿವಣ್ಣ ಅವರಿಗೆ ಏರ್ಪಡಿಸಿದ್ದ ನುಡಿನಮನ ಕಾರ್ಯಕ್ರಮದಲ್ಲಿ ಮಾತನಾಡಿದ ಹಿರಿಯರು ಈ ಅಭಿಪ್ರಾಯ ವ್ಯಕ್ತಪಡಿಸಿದರು. ಆರಂಭದಲ್ಲಿ ಇಬ್ಬರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಒಂದು ನಿಮಿಶ ಮೌನ ಪ್ರಾರ್ಥನೆಯನ್ನು ಸಲ್ಲಿಸಲಾಯಿತು.

ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ಕನ್ನಡ ಪ್ರಭ ಹಾಗೂ ಸುವರ್ಣ ನ್ಯೂಸ್ ಪ್ರಧಾನ ಸಂಪಾದಕ ರವಿ ಹೆಗಡೆ, ಹಿರಿಯ ಪತ್ರಕರ್ತರಾದ ಟಿಜೆಎಸ್ ಜಾರ್ಜ್, ಅ.ಚ.ಶಿವಣ್ಣ ಅವರಲ್ಲಿದ್ದ ಸಮಗ್ರ ಒಳನೋಟ ಮತ್ತು ದೂರದೃಷ್ಟಿಯಿಂದಾಗಿ ಸುದ್ದಿಮನೆಗೆ ಆ ಕಾಲಘಟ್ಟದಲ್ಲಿ ತನ್ನದೇ ಆದ ಮಹತ್ವ ತುಂಬಿತ್ತು ಎಂದು ಹೇಳಿದರು.

ಇಂದು ನಾವು ಕಾಣುತ್ತಿರುವ ಪತ್ರಿಕೋದ್ಯಮದಲ್ಲಿ ಒಂದಷ್ಟು ವೃತ್ತಿ ಬದ್ದತೆಯ ಬೆಳವಣಿಗೆಗೆ ಅಂದು ಅವರಲ್ಲಿದ್ದ ಕೆಲ ಮೌಲ್ಯಗಳು ಪೂರಕವಾಗಿದ್ದವು ಎಂದು ಅಭಿಪ್ರಾಯಪಟ್ಟರು.

ಕಳೆದ ಇಪ್ಪತ್ತೈದು ವರ್ಷಗಳಿಂದ ಪತ್ರಿಕೋ ದ್ಯಮವು ತಂತ್ರಜ್ಞಾನದ ಬದಲಾವಣೆಗೆ ತಕ್ಕಂತೆ ಬದಲಾಗುತ್ತಾ ಹೋಗುತ್ತಿದೆ. ಟಿ.ಜೆ.ಎಸ್ ಮತ್ತು ಶಿವಣ್ಣರವರು ತಮ್ಮ ವೃತ್ತಿಜೀವನದಲ್ಲಿ ಮಾಧ್ಯಮದಲ್ಲಿ ಆದ ಬದಲಾವಣೆಯನ್ನು ವೃತ್ತಿಯಲ್ಲಿ ಅಳವಡಿಸಿಕೊಂಡು ಉಳಿದ ಪತ್ರಕರ್ತರಿಗೆ ಮಾದರಿಯಾದರು ಎಂದು ಹೇಳಿದರು.

ಸಂಯುಕ್ತ ಕರ್ನಾಟಕ ಪತ್ರಿಕೆಯ ಹುಣಸವಾಡಿ ರಾಜನ್ ಮಾತನಾಡಿ, ಟಿಜೆಎಸ್ ಜಾರ್ಜ್ ಮತ್ತು ಅ.ಚ.ಶಿವಣ್ಣ ಇಬ್ಬರೂ ವೃತ್ತಿ ಬದ್ಧತೆಯನ್ನು ಮೆರೆದವರು. ಇಂದಿನ ಯುವ ಪತ್ರಕರ್ತರಿಗೆ ಮಾದರಿಯಾದವರು ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕ ಮಾತುಗಳನ್ನಾಡಿದ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಸಂಘವು ಮನೆಯಂಗಳದಲ್ಲಿ ಮನದುಂಬಿ ನಮನ ಕಾರ್ಯಕ್ರಮದಲ್ಲಿ ಟಿಜೆಎಸ್ ಜಾಜರ್ ಹಾಗೂ ಅ.ಚ ಶಿವಣ್ಣ ಅವರನ್ನು ಅವರ ಮನೆಯಂಗಳದಲ್ಲಿ ಸನ್ಮಾನಿಸಿದ್ದು ಹೆಮ್ಮೆಯ ಸಂಗತಿಯಾಗಿತ್ತು. ನಮ್ಮನ್ನಗಲಿದ ಈ ಇಬ್ಬರೂ ಪತ್ರಕರ್ತರ ಬದ್ಧತೆ ಮತ್ತು ಸಾಮರ್ಥ್ಯ ನಿಜಕ್ಕೂ ಇಂದಿನ ಪತ್ರಕರ್ತರಿಗೆ ಮಾದರಿ ಎಂದರು.

ಐಎಡಬ್ಲ್ಯೂಜೆ ಅಧ್ಯಕ್ಷ ಬಿ.ವಿ. ಮಲ್ಲಿಕಾರ್ಜುನಯ್ಯ ಮಾತನಾಡಿ, ಜಾಜರ್ ಹಾಗೂ ಶಿವಣ್ಣ ವಿಶಿಷ್ಟ ದೃಷ್ಟಿಕೋನ ಹೊಂದಿದ್ದ ಪತ್ರಕರ್ತರಾಗಿದ್ದರು. ಅವರಿಬ್ಬರ ಪತ್ರಿಕೋದ್ಯಮ ಸೇವೆ ಎಂದೆಂದಿಗೂ ಪತ್ರಿಕೋದ್ಯಮದಲ್ಲಿ ನೆನಪಿನಲ್ಲಿ ಇಡುವಂತಾದ್ದಾಗಿದೆ ಎಂದರು.

ಹಿರಿಯ ಪತ್ರಕರ್ತರಾದ ಡಿ.ಮಹಾದೇವಪ್ಪ ಅವರು ಮಾತನಾಡಿ, ಜಾರ್ಜ್ ಅವರೊಬ್ಬ ಸಂತ ನಂತೆ ಸುದ್ದಿಮನೆಯಲ್ಲಿ ಗಮನ ಸೆಳೆದರು. ಅ.ಚ.ಶಿವಣ್ಣ ಅವರು ಸುದ್ದಿ ಗ್ರಹಿಸಿ ಬರೆಯುವುದರಲ್ಲಿ ಪ್ರಾವಿಣ್ಯತೆ ಹೊಂದಿದ್ದರು ಎಂದು ಇಬ್ಬರು ಪತ್ರಕರ್ತರ ಗುಣಗಾನ ಮಾಡಿದರು.

ಅ.ಚ.ಶಿವಣ್ಣ ಅವರ ಪುತ್ರ ಡಾ.ದೀಪಕ್ ಶಿವಣ್ಣ ಮಾತನಾಡಿ, ಅಪ್ಪನ ಬಗ್ಗೆ ಈಗಲೂ ಸುದ್ದಿಮನೆಯಲ್ಲಿ ಇಷ್ಟೊಂದು ಗೌರವ ಇಟ್ಟುಕೊಂಡಿರುವುದು ನಮ್ಮ ಕುಟುಂಬಕ್ಕೆ ಹೆಮ್ಮೆಯ ಸಂಗತಿ ಎಂದರು. ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಬೆಂಗಳೂರು ನಗರ ಜಿಲ್ಲಾ ಘಟದ ಸದಸ್ಯರು, ಗ್ರಾಮಾಂತರ ಘಟಕದ ಪದಾಧಿಕಾರಿಗಳು ಸೇರಿದಂತೆ ಹಲವರು ಕಾರ್ಯ ಕ್ರಮದಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮದ ಕೊನೆಯಲ್ಲಿ ಎಸ್.ಸೋಮಶೇಖರ ಗಾಂಧಿ ವಂದಿಸಿದರು.

Printed, Published and Owned by K.DEEPAK. Printed at THEJASVI OFFSET PRINTER, NO. 726 SHANKARA NAGAR, CHANDAGALU LAYOUT, MANDYA, KARNATAKA-571401
Published At Address: SHARADA, No. 2979/2, D23/2, 3rd floor, 6th Main, V V Mohalla, Mysore-570002. Editor: K.DEEPAK